ಸಂಪಾದಕ : ಶಿವಕುಮಾರ್ ಕೆ. ವರ್ಲಕೊಂಡ

PRGI : KNKAN/26/A2919
E-mail: skandagirivani@gmail.com

# ಸ್ಕಂದಗಿರಿ ವಾಣಿ

ಕನ್ನಡ ದಿನಪತ್ರಿಕೆ

₹2/-

Editor : SHIVAKUMAR. K.
M.: 81475 82389 / 9743641515

ಸತ್ಯದ ಧ್ವನಿ

SKANDAGIRI VANI Kannada Daily SUNDAY | October 18, 2026 | Volume 01 | Issue 92 | Pages 4 |

# ಬಾಗೇಪಲ್ಲಿ ಎಪಿಎಂಸಿ ಮಾರುಕಟ್ಟೆಯ ನಡುರಸ್ತೆಯಲ್ಲಿ ಚಿಲ್ಲರೆ ಅಂಗಡಿಗಳು

## ತರಕಾರಿ ಸಾಗಿಸಲು ರೈತರ ಪರದಾಟ ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಸಾರ್ವಜನಿಕರ ಆಕ್ರೋಶ

ಡಿ.ಎನ್.ಕೃಷ್ಣಾರೆಡ್ಡಿ

**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಭಾಗ್ಯನಗರ:** ಪಟ್ಟಣದ ಎಪಿಎಂಸಿ ಮಾರುಕಟ್ಟೆಯ ಮುಖ್ಯ ರಸ್ತೆಯಲ್ಲಿ ಒಬ್ಬರ ಮೇಲೆ ಒಬ್ಬರು ಪೈಪೋಟಿಗೆ ಬಿದ್ದವರಂತೆ ನಡು ರಸ್ತೆಯಲ್ಲಿಯೇ ತರಕಾರಿ ಅಂಗಡಿಗಳನ್ನಿಟ್ಟುಕೊಂಡು

ಚಿಲ್ಲರೆ ವ್ಯಾಪಾರಿಗಳ ಅಡ್ಡಾದಿಡ್ಡಿ ವ್ಯಾಪಾರದಿಂದ ಮಾರುಕಟ್ಟೆಯ ವ್ಯವಸ್ಥೆ ಹದಗೆಟ್ಟಿದ್ದು, ರೈತರು ಹಾಗೂ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುವಂತಾಗಿದೆ.



ಇಲ್ಲಿನ ಎಪಿಎಂಸಿ ಮಾರುಕಟ್ಟೆಗೆ ಯಾರೂ ದಿಕ್ಕಿಲ್ಲದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಹೇಳುವವರು ಕೇಳುವವರು ಇಲ್ಲವಾಗಿದ್ದಾರೆ. ಸಗಟು ವ್ಯಾಪಾರದ ಸ್ಥಳದಲ್ಲಿ ಚಿಲ್ಲರೆ ವ್ಯಾಪಾರಿಗಳದ್ದೇ ಕಾರು-ಬಾರು. ಅನಧಿಕೃತವಾಗಿ ಚಿಲ್ಲರೆ ತರಕಾರಿ ಅಂಗಡಿಗಳನ್ನಿಟ್ಟುಕೊಂಡು ವ್ಯಾಪಾರ ನಡೆಸುತ್ತಿರುವ ಕೆಲವು ಚಿಲ್ಲರೆ ವ್ಯಾಪಾರಿಗಳು ರಸ್ತೆಯಲ್ಲೇ ತರಕಾರಿ ಅಂಗಡಿಗಳನ್ನು ಹಾಕಿಕೊಂಡು ವ್ಯಾಪಾರ ಮಾಡುತ್ತಿರುವುದರಿಂದ ವಾಹನಗಳ ಸಂಚಾರಕ್ಕೆ ತೀವ್ರ ಅಡಚಣೆ ಉಂಟಾಗುತ್ತಿದೆ.

ಮಾರುಕಟ್ಟೆಗೆ ತರಕಾರಿ ಮಾರಾಟಕ್ಕೆ ಬರುವ ರೈತರು ತಮ್ಮ ಉತ್ಪನ್ನಗಳನ್ನು ಸಾಗಿಸಲು ಹಾಗೂ ವಾಹನಗಳನ್ನು ನಿಲ್ಲಿಸಲು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ವಿಶೇಷವಾಗಿ ತರಕಾರಿ ತುಂಬಿಕೊಂಡು ಮಾರುಕಟ್ಟೆಗೆ ಆಗಮಿಸುವ ರೈತರು ಚಿಲ್ಲರೆ ವ್ಯಾಪಾರಿಗಳಿಂದ ರಸ್ತೆ ಒತ್ತುವರಿ ಮತ್ತು ವಾಹನ ದಟ್ಟಣೆಯಿಂದಾಗಿ ತಮ್ಮ ಉತ್ಪನ್ನಗಳನ್ನು ಇಳಿಸಲು ಹಾಗೂ ಸಾಗಿಸಲು ಸಾಕಷ್ಟು ಸಮಯ ವ್ಯಯಿಸಬೇಕಾಗಿದೆ. ಇದರಿಂದ ರೈತರು ಮತ್ತು ವ್ಯಾಪಾರಿಗಳ ನಡುವೆ ಅನಗತ್ಯ ಗೊಂದಲ ಉಂಟಾಗುತ್ತಿದೆ. ಮಾರುಕಟ್ಟೆಗೆ ಬರುವ ಗ್ರಾಹಕರು ಹಾಗೂ ಸಾರ್ವಜನಿಕರಿಗೂ ಸುಗಮ ಸಂಚಾರ ಕಷ್ಟಕರವಾಗಿದೆ.

ಎಪಿಎಂಸಿ ಮಾರುಕಟ್ಟೆಯಲ್ಲಿ ಸಗಟು ವ್ಯಾಪಾರಕ್ಕೆ ಸೂಕ್ತ ವ್ಯವಸ್ಥೆ ಕಲ್ಪಿಸುವುದು, ರೈತರ ಉತ್ಪನ್ನಗಳ ಮಾರಾಟಕ್ಕೆ ಅನುಕೂಲವಾಗುವಂತೆ ಮಾಡುವುದು ಎಪಿಎಂಸಿ ಅಧಿಕಾರಿಗಳ ಜವಾಬ್ದಾರಿಯಾಗಿದ್ದರೂ ಇದಕ್ಕೂ ನಮಗೂ ಸಂಬಂಧವೇ ಇಲ್ಲ ಎಂಬಂತೆ ವರ್ತಿಸುತ್ತಿದ್ದಾರೆ ಎಂದು ರೈತರು ಆರೋಪಿಸುತ್ತಿದ್ದಾರೆ.

ಮುಖ್ಯ ರಸ್ತೆಯ ಮಧ್ಯದಲ್ಲಿ ಚಿಲ್ಲರೆ ತರಕಾರಿ ವ್ಯಾಪಾರ ನಡೆಸುತ್ತಿರುವವರ ರಸ್ತೆ ಒತ್ತುವರಿ ತೆರವುಗೊಳಿಸುವುದು ಹಾಗೂ ರೈತರಿಗೆ ಅನುಕೂಲಕರ ವಾತಾವರಣ ನಿರ್ಮಿಸುವುದು ಸಂಬಂಧಪಟ್ಟ ಅಧಿಕಾರಿಗಳ ಜವಾಬ್ದಾರಿಯಾಗಿದೆ.

ಆದರೆ, ಈ ಸಮಸ್ಯೆಯ ಬಗ್ಗೆ ಅಧಿಕಾರಿಗಳು ನಿರ್ಲಕ್ಷ್ಯ ವಹಿಸುತ್ತಿದ್ದಾರೆ ಎಂಬ ಆರೋಪ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ.

**ರಸ್ತೆಗೆ ಬರಲು ಪೈಪೋಟಿಗೆ ಬಿದ್ದಿರುವ ಚಿಲ್ಲರೆ ವ್ಯಾಪಾರಿಗಳು:**

ಮಾರುಕಟ್ಟೆಯ ರಸ್ತೆಗಳಲ್ಲಿನ ಅನಧಿಕೃತ ಚಿಲ್ಲರೆ ತರಕಾರಿ ಅಂಗಡಿಗಳನ್ನು ಇಟ್ಟುಕೊಂಡಿರುವ ಚಿಲ್ಲರೆ ವ್ಯಾಪಾರಿಗಳು ಒಬ್ಬರ ಮೇಲೆ ಒಬ್ಬರು ಪೈಪೋಟಿಗೆ ಬಿದ್ದವರಂತೆ ನಡುರಸ್ತೆಯಲ್ಲಿಯೇ ತರಕಾರಿಗಳನ್ನು ಇಟ್ಟುಕೊಂಡಿರುವುದು ಇಲ್ಲಿನ ಆಡಳಿತ ವ್ಯವಸ್ಥೆಯ ನಿರ್ಲಕ್ಷ್ಯಕ್ಕೆ ಹಿಡಿದ ಕೈಗನ್ನಡಿಯಂತಿದೆ.

ಚಿಲ್ಲರೆ ಅಂಗಡಿಗಳನ್ನು ತೆರವುಗೊಳಿಸಿ, ಸಗಟು ವ್ಯಾಪಾರಿಗಳಿಗೆ ಸೂಕ್ತ ಸ್ಥಳಾವಕಾಶ ಕಲ್ಪಿಸಬೇಕು. ರೈತರು ತಮ್ಮ ತರಕಾರಿ ಉತ್ಪನ್ನಗಳನ್ನು ಯಾವುದೇ ಅಡೆತಡೆಯಿಲ್ಲದೆ ಸಾಗಿಸಲು ಅನುಕೂಲ ಮಾಡಿಕೊಡಬೇಕು. ಜೊತೆಗೆ, ಮಾರುಕಟ್ಟೆಯಲ್ಲಿ ಸುಗಮ ಸಂಚಾರಕ್ಕೆ ಅಗತ್ಯ ಕ್ರಮ ಕೈಗೊಂಡು, ನಿಯಮಿತ ಮೇಲ್ವಿಚಾರಣೆ ನಡೆಸಬೇಕೆಂದು ರೈತರು ಹಾಗೂ ಸಾರ್ವಜನಿಕರು ಸಂಬಂಧಪಟ್ಟ ಅಧಿಕಾರಿಗಳನ್ನು ಒತ್ತಾಯಿಸಿದ್ದಾರೆ.

ಸಗಟು ವ್ಯವಹಾರದ ಸಮಯದಲ್ಲಿಯೇ ರಾಜಾರೋಷದಿಂದ ಚಿಲ್ಲರೆ ವ್ಯಾಪಾರ



ಎಪಿಎಂಸಿ ನಿಯಮಗಳ ಪ್ರಕಾರ ಸಗಟು ವ್ಯವಹಾರದ ಸಮಯದಲ್ಲಿ ಚಿಲ್ಲರೆ ವ್ಯಾಪಾರ ಮಾಡಬಾರದು ಎಂದು ಹೇಳುತ್ತದೆ. ಆದರೆ ಇಲ್ಲಿನ ಎಪಿಎಂಸಿ ಮಾರುಕಟ್ಟೆಯಲ್ಲಿ ನಿಯಮಗಳು ಬೀದಿಪಾಲಾಗುತ್ತಿವೆ. ಚಿಲ್ಲರೆ ವ್ಯಾಪಾರ ರಾಜಾರೋಷವಾಗಿ ನಡೆಯುತ್ತಿರುವುದು ಕೆಲ ಚಿಲ್ಲರೆ ವ್ಯಾಪಾರಿಗಳು ಹೇಳುವಂತೆ ತಿಂಗಳ ಮಾಮೂಲಿಯೇ ಕಾರಣವಂತೆ.

**ವ್ಯಾಪಾರದ ಸಮಯಕ್ಕಿಲ್ಲ ಸ್ಪಷ್ಟತೆ**

ಇಲ್ಲಿನ ಎಪಿಎಂಸಿ ಮಾರುಕಟ್ಟೆಯಲ್ಲಿ ವಹಿವಾಟಿನ ಸಮಯದ ಗೊಂದಲ ಹಾಗೆಯೇ ಮುಂದುವರೆದಿದೆ. ಮಹಮದ್ ಬಿನ್ ತೊಲಕ್ ದರ್ಭಾರಿನಂತೆ ವಹಿವಾಟಿನ ಸಮಯವನ್ನು ಅಧಿಕಾರಿಗಳು ಬದಲಾಯಿಸುತ್ತಲೇ ಇದ್ದಾರೆ. ಅವರೇ ಮಾಡುವ ಆದೇಶವನ್ನು ಅವರೇ ಉಲ್ಲಂಘಿಸುತ್ತಿದ್ದಾರೆ. ಇಷ್ಟಕ್ಕೂ ಅಧಿಕಾರಿಗಳು ಯಾರ ಒತ್ತಡಕ್ಕೆ ಮಣಿದು ವಹಿವಾಟಿನ ಸಮಯವನ್ನು ಪದೇ ಪದೇ ಬದಲಾಯಿಸುತ್ತಿದ್ದಾರೆ ಎಂಬುದೇ ಅರ್ಥವಾಗುತ್ತಿಲ್ಲ ಎಂದು ಹೆಸರು ಹೇಳಲು ಇಚ್ಚಿಸದ ಸಗಟು ವ್ಯಾಪಾರಿಯೊಬ್ಬರು ತಿಳಿಸಿದರು.

ಕೆಲವೊಮ್ಮೆ ಬೆಳಿಗ್ಗೆ 4 ಗಂಟೆಯಿಂದ ಎಂದು ಮತ್ತೊಮ್ಮೆ 8 ಗಂಟೆಯಿಂದ ಎಂದು ಆದೇಶಗಳನ್ನು ಬದಲಾವಣೆ ಮಾಡುತ್ತಲೇ ಇದ್ದಾರೆ. ರೈತರಲ್ಲೂ ಇದು ಗೊಂದಲಕ್ಕೆ ಕಾರಣವಾಗುತ್ತಿದೆ. ಇಲ್ಲಿನ ಚಿಲ್ಲರೆ ವ್ಯಾಪಾರಿಗಳ ಕಿರುಕುಳಕ್ಕೆ ಮುಕ್ತಿ ಹೇಳದಿದ್ದರೆ ಎಪಿಎಂಸಿ ಮಾರುಕಟ್ಟೆ ಕಚೇರಿಯ ಎದುರು ಪ್ರತಿಭಟನೆಯನ್ನು ನಡೆಸಬೇಕಾಗುತ್ತದೆ ಎಂದು ರೈತರು ಎಚ್ಚರಿಕೆ ನೀಡಿದ್ದಾರೆ.

ಎಪಿಎಂಸಿ ಹಿರಿಯ ಅಧಿಕಾರಿಗಳು ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ, ಬಾಗೇಪಲ್ಲಿ ಎಪಿಎಂಸಿ ಮಾರುಕಟ್ಟೆಯಲ್ಲಿನ ಅವ್ಯವಸ್ಥೆಗೆ ಶಾಶ್ವತ ಪರಿಹಾರ ಕಲ್ಪಿಸುವರೇ ಎಂಬುದನ್ನು ಕಾದುನೋಡಬೇಕಿದೆ.

## ಶಾಸಕ ಪ್ರದೀಪ್ ಈಶ್ವರ್‌ಗೆ ಸಂವಿಧಾನದ ಅರಿವಿಲ್ಲ!
### ಶಾಸಕರ ನಿವಾಸ ಎಲ್ಲಿದೆ ಎಂದು ಕ್ಷೇತ್ರದ ಜನರಿಗೆ ಗೊತ್ತಿಲ್ಲ!

**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಚಿಕ್ಕಬಳ್ಳಾಪುರ:** ಶಾಸಕ ಪ್ರದೀಪ್ ಈಶ್ವರ್ ಅವರಿಗೆ ಸಂವಿಧಾನದ ಅರಿವೇ ಇಲ್ಲ, ಅವರ ಮನೆಯ ವಿಳಾಸ ಎಲ್ಲಿದೆ ಎಂಬುದು ಕ್ಷೇತ್ರದ ಒಬ್ಬೇ ಒಬ್ಬ ಮತದಾರನಿಗೆ ಗೊತ್ತಿಲ್ಲ.

ಸಂವಿಧಾನದ ಅರಿವಿಲ್ಲದ ಶಾಸಕರು ಜಾತಿಗಳ ನಡುವೆ ವಿಷ ಬೀಜ ಬಿತ್ತುವ ಕೆಲಸ ಮಾಡುತ್ತಿದ್ದಾರೆ ಎಂದು ಅಹಿಂದ ಸಂಘಟನೆ ಮುಖಂಡರು ಆಕ್ರೋಶ ವ್ಯಕ್ತಪಡಿಸಿದ ಘಟನೆ ಇಂದು ನಡೆಯಿತು.

ಮಾತಿಗೆ ಮೊದಲು ಅಂಬೇಡ್ಕರ್ ಅವರ ಹೆಸರು ಹೇಳುವ ಚಿಕ್ಕಬಳ್ಳಾಪುರ ಶಾಸಕ ಪ್ರದೀಪ್ ಈಶ್ವರ್ ಅವರಿಗೆ ಸಂವಿಧಾನದ ಅರಿವೇ ಇಲ್ಲ ಎಂದು ಅಹಿಂದ ಸಂಘಟನೆಯ ಮುಖಂಡರು ಆಕ್ರೋಶ ವ್ಯಕ್ತಪಡಿಸಿದ ಘಟನೆ ಇಂದು ನಡೆಯಿತು. ಚಿಕ್ಕಬಳ್ಳಾಪುರದ ಪತ್ರಕರ್ತರ ಭವನದಲ್ಲಿ ಇಂದು ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರಾಷ್ಟ್ರೀಯ ಅಹಿಂದ ಸಂಘಟನೆಯ ಚಿಕ್ಕಬಳ್ಳಾಪುರ ತಾಲೂಕು ಹೋರಾಟ ಸಮಿತಿ ಅಧ್ಯಕ್ಷ ಎನ್. ಮಂಜುನಾಥ್, ಕಳೆದ ಮೂರೂವರೆ ವರ್ಷದ ಶಾಸಕರ ಅವಧಿಯಲ್ಲಿ ಅವರು ಕ್ಷೇತ್ರಕ್ಕೆ ಮಾಡಿದ ಅಭಿವೃದ್ಧಿ ಶೂನ್ಯ ಎಂದರು.

ಸದನದಲ್ಲಿ ಕೇವಲ ಅನಗತ್ಯ ಚರ್ಚೆಗಳಿಗೆ ಮಾತ್ರ ಸಮಯ ವ್ಯರ್ಥ ಮಾಡಿರುವ ಶಾಸಕ ಪ್ರದೀಪ್ ಈಶ್ವರ್ ಅವರು ಒಂದೇ ಒಂದು ನಿಮಿಷ ಕ್ಷೇತ್ರದ ಅಭಿವೃದ್ಧಿಯ ಬಗ್ಗೆ ಚಕಾರವೆತ್ತಿಲ್ಲ. ಇವರ ಮನೆಯ ವಿಳಾಸ ಕ್ಷೇತ್ರದ ಒಬ್ಬೇ ಒಬ್ಬ ಮತದಾರನಿಗೆ ಗೊತ್ತಿಲ್ಲ. ಇವರಿಗೆ ಸಂವಿಧಾನದ ಅರಿವೇ ಇಲ್ಲ. ಇವರು ಕೇವಲ ಜಾತಿಗಳ ನಡುವೆ ವಿಷ ಬೀಜ ಬಿತ್ತುವ ಕೆಲಸ ಮಾಡುತ್ತಿದ್ದಾರೆ. ಈಗಲಾದರೂ ಶಾಸಕರು ಬದಲಾಗಿ ಕ್ಷೇತ್ರದ ಅಭಿವೃದ್ಧಿಯ ಬಗ್ಗೆ ಗಮನ ಹರಿಸಲಿ ಎಂದು ಸಲಹೆ ನೀಡಿದರು.

ಅಹಿಂದ ಸಂಘಟನೆಯ ಮತ್ತೊಬ್ಬ ಮುಖಂಡ ಎಂ.ಎಂ. ಬಾಷಾ ಮಾತನಾಡಿ, ಮೇಲ್ಜಾತಿಯ ಮತ ಬೇಡ, ಅಲ್ಪಸಂಖ್ಯಾತ ಮತ ಬೇಡ ಎಂದು ಹೇಳುವುದು ಸಾಮಾನ್ಯವಾಗಿದೆ. ಇದು ಸಂವಿಧಾನ ವಿರೋಧಿ ನಡೆ, ಇದನ್ನು ಉಗ್ರವಾಗಿ ಖಂಡಿಸುವುದಾಗಿ ಹೇಳಿದರು. ಅಲ್ಲದೆ ಅಲ್ಪಸಂಖ್ಯಾತರ ನಾಯಕರೊಬ್ಬರ ಜಯಂತಿಯನ್ನು ಸರ್ಕಾರದಿಂದ ಆಚರಿಸುವಂತೆ ನಾವು ನಿರಂತರವಾಗಿ ಮನವಿ ನೀಡುತ್ತಿದ್ದರೂ ಯಾವುದೇ ಸರ್ಕಾರ ಗಮನ ನೀಡುತ್ತಿಲ್ಲ. ಎಪಿಜೆ ಅಬ್ದುಲ್ ಕಲಾಂ ಸೇರಿದಂತೆ ಅಲ್ಪಸಂಖ್ಯಾತ ಗಣ್ಯರ ಜಯಂತಿಗಳನ್ನು ಸರ್ಕಾರದ ಮಟ್ಟದಲ್ಲಿ ಆಚರಿಸಲು ಸರ್ಕಾರ ಕ್ರಮ ವಹಿಸಬೇಕು ಎಂದು ಒತ್ತಾಯಿಸಿದರು.

ರಾಷ್ಟ್ರೀಯ ಅಹಿಂದ ಸಂಘಟನೆಯ ರಾಜ್ಯಾಧ್ಯಕ್ಷ ಮುತ್ತಣ್ಣ ಎಸ್ ಶಿವಳ್ಳಿ ಮಾತನಾಡಿ, ಇಂದು ಅಹಿಂದ ಸಂಘಟನೆಯಿಂದ ಬೃಹತ್ ಸಮಾವೇಶ ಹಮ್ಮಿಕೊಳ್ಳಲಾಗಿತ್ತು. ಆದರೆ ವಿಧಾನ ಪರಿಷತ್ ಚುನಾವಣೆಯ ನೀತಿ ಸಂಹಿತೆ ಕಾರಣ ಹೇಳಿ, ಕಾರ್ಯಕ್ರಮ ಮಾಡದಂತೆ ಅಧಿಕಾರಿಗಳು ಹೇಳಿದ ಕಾರಣ ಕಾರ್ಯಕ್ರಮ ಮುಂದೂಡಲಾಗಿದ್ದು, ನೀತಿಸಂಹಿತೆ ಮುಗಿದ ನಂತರ ಕಾರ್ಯಕ್ರಮವನ್ನು ಅದ್ದೂರಿಯಾಗಿ ಮಾಡಿ, ಅಲ್ಪಸಂಖ್ಯಾತ, ಹಿಂದುಳಿದ ಮತ್ತು ದಲಿತರಿಗೆ ಸಿಗಬೇಕಾದ ಯೋಜನೆಗಳ ಕುರಿತು ಅರಿವು ಮೂಡಿಸುವ ಕೆಲಸ ಮಾಡಲಾಗುವುದು. ಪ್ರಸ್ತುತ ಅಹಿಂದ ವರ್ಗಗಳ ಜನರಿಗೆ ಇರುವ ಯೋಜನೆಗಳ ಬಗ್ಗೆ ಮಾಹಿತಿ ನೀಡುವಲ್ಲಿ ಸರ್ಕಾರಿ ಅಧಿಕಾರಿಗಳು ವಿಫಲರಾಗಿದ್ದಾರೆ. ಹಾಗಾಗಿ ಸಂಘಟನೆ ಈ ಜವಾಬ್ದಾರಿ ಮಾಡಲಿದೆ ಎಂದರು.

ಅಲ್ಲದೆ ಅಹಿಂದ ವರ್ಗಗಳಿಗೆ ಅನ್ಯಾಯವಾದರೆ ಯಾವುದೇ ಕಾರಣಕ್ಕೂ ಸಹಿಸಲು ಸಾಧ್ಯವಿಲ್ಲ. ಹೋರಾಟ ಮಾಡಲಾಗುವುದು. ಶಾಸಕರು ಮೇಲ್ಜಾತಿಯ ಮತ ಬೇಡ ಎಂದು ಹೇಳಿರುವುದನ್ನು ಖಂಡಿಸುತ್ತೇವೆ. ಹೀಗೆ ಮಾತನಾಡುವುದು ಸಂವಿಧಾನ ಬಾಹಿರವಾಗಿದೆ ಎಂದು ಮುತ್ತಣ್ಣ ಹೇಳಿದರು. ಮುನೇಗೌಡ ಮಾತನಾಡಿ, ಇಂದಿನ ಕಾರ್ಯಕ್ರಮ ಮುಂದೂಡಲು ಅಧಿಕಾರಿಗಳ ನಿರ್ಲಕ್ಷ್ಯವೇ ಕಾರಣವಾಗಿದೆ. ಅಹಿಂದ ವರ್ಗಗಳಿಗೆ ಯೋಜನೆಗಳ ಬಗ್ಗೆ ಮಾಹಿತಿ ಇಲ್ಲದೆ ಅನ್ಯಾಯವಾಗುತ್ತಿದೆ. ಸರ್ಕಾರ ಅಹಿಂದ ವರ್ಗಗಳ ಅಭಿ ವೃದ್ಧಿಗೆ ಹೆಚ್ಚಿನ ಗಮನ ಹರಿಸಬೇಕು ಎಂದು ಆಗ್ರಹಿಸಿದರು.

ಮುಖಂಡ ಕೋಡೇಸ್ ವೆಂಕಟೇಶ್ ಮಾತನಾಡಿ, ಕ್ಷೇತ್ರದಲ್ಲಿ ಅಭಿವೃದ್ಧಿ ಹಿನ್ನೆಡೆಯಾಗಿದೆ. ಜಾಲಪ್ಪ ಸೇರಿದಂತೆ ಅನೇಕ ಮಂದಿ ಅಹಿಂದ ನಾಯಕರು ಇಲ್ಲಿ ಶ್ರಮಿಸಿದ್ದಾರೆ. ಅವರ ಹೆಸರು ಉಳಿಸುವ ರೀತಿಯಲ್ಲಿ ಅಭಿವೃದ್ಧಿ ನಡೆಯಬೇಕು ಎಂದರು.

## ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಎಸ್‌ಐಆರ್ ರದ್ದತಿಗೆ ಒತ್ತಾಯ

**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಗುಡಿಬಂಡೆ :** ಎಸ್‌ಐಆರ್ ನ್ನು ರದ್ದು ಮಾಡಿ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರನ್ನು ವಜಾ ಮಾಡಲು ಆಗ್ರಹಿಸಿ ಮತಕಾವಲು ಸಮಿತಿಯಿಂದ ತಹಶೀಲ್ದಾರ್ ಕಛೇರಿಯ ವರಗೂ ಮೆರವಣಿಗೆ ಮೂಲಕ ಬಂದು ಪ್ರತಿಭಟನೆಯನ್ನು ನಡೆಸಿ ತಹಶೀಲ್ದಾರ್ ಮುಖಾಂತರ ರಾಷ್ಟ್ರಪತಿಯವರಿಗೆ ಮನವಿ ಪತ್ರವನ್ನು ಸಲ್ಲಿಸಿದರು.

ಪಟ್ಟಣದಲ್ಲಿನ ತಹಶೀಲ್ದಾರ್ ಕಛೇರಿಯವರಗೂ ತಾಲೂಕು ಮತಕಾವಲು ಸಮಿತಿಯ ಕಾರ್ಯಕರ್ತರು ಮೆರವಣಿಗೆ ಮೂಲಕ ಬಂದು ಎಸ್‌ಐಆರ್ ರದ್ದು ಮಾಡಿ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರನ್ನು ವಜಾಮಾಡಿ ಎಂದು ಘೋಷಣೆಗಳನ್ನು ಕೂಗಿಕೊಂಡು ಪ್ರತಿಭಟನೆಯನ್ನು ಆರಂಭಿಸಿದರು.



ಈ ವೇಳೆ ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಮತಕಾವಲು ಸಮಿತಿ ಅಧ್ಯಕ್ಷ ಎಚ್.ಪಿ ಲಕ್ಷ್ಮೀನಾರಾಯಣ ಅಸಂವಿಧಾನವಾಗಿ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರನ್ನು ನೇಮಕ ಮಾಡಿರುವುದು ಕಾಣುವಂತೆ ಇದೆ. ಈ ವ್ಯವಸ್ಥೆ ಒಬ್ಬ ವ್ಯಕ್ತಿಯ ಮೇಲೆ ನಡೆಯಲ್ಲ. ನಡೆಯಬಾರದು ಎಂದು ಅಂದು ಡಾ.ಬಿ ಆರ್ ಅಂಬೇಡ್ಕರ್ ರವರು ಸಂವಿಧಾನದ ಮೂಲಕ ಬರೆದು ತೋರಿಸಿದ್ದಾರೆ.

ಆದರೆ ಇಂದಿನ ಕೇಂದ್ರದ ಬಿಜೆಪಿ ಸರ್ಕಾರವು ಜ್ಞಾನೇಶ್ ಕುಮಾರ್ ಗೆ ಕಾನೂನು ರೀತಿಯಲ್ಲಿ ಬಲವನ್ನು ಕೊಟ್ಟಿದೆ. ಈ ಜ್ಞಾನೇಶ್ ಕುಮಾರ್ ನಿಂದ ಕೇಂದ್ರದಲ್ಲಿ ಹಾಗೇ ಕೆಲವು ರಾಜ್ಯಗಳಲ್ಲಿ ಬಿಜೆಪಿ ಪಕ್ಷವು ಅಧಿಕಾರಕ್ಕೆ ಬರಲು ಕಾರಣವಾಗಿದೆ.

ಪಶ್ಚಿಮ ಬಂಗಾಳದಲ್ಲಿ 25 ಲಕ್ಷ ಜನ ಮತದಾರರು ನಾವು ಈ ದೇಶದ ಮತದಾರರು ಎಂದು ಚುನಾವಣಾ ಆಯೋಗಕ್ಕೆ ಮನವಿ ಮಾಡಿದರು. ಸಾರ್ವತ್ರಿಕ ಚುನಾವಣೆಯಲ್ಲಿ ಮತದಾನದಿಂದ ಅವರನ್ನು ದೂರ ಉಳಿಸಿದರು.

ನಮೂನೆ 7 ನ್ನು ಬಿಜೆಪಿ ಕಛೇರಿಯಲ್ಲಿ ಮುದ್ರಣ ಮಾಡಿಕೊಂಡು ಅವರಿಗೆ ಬೇಡವಾದ ಮತದಾರರನ್ನು ತೆಗೆದುಹಾಕುತ್ತಿದ್ದಾರೆ. ಮತ ಪಟ್ಟಿಗೆಗಳಿಂದ ಅವರನ್ನು ತೆಗೆದು ಹಾಕಲು ಇವರಿಗೆ ನೇರವಾಗಿ ಹಕ್ಕುಗಳನ್ನು ಕೇಂದ್ರದ ಬಿಜೆಪಿ ನೀಡಿರುವುದು ಎಂದು ದೇಶದ ಜನ ನೋಡುತ್ತಿದ್ದೇವೆ.

ವಿದೇಶ ಪತ್ರಿಕೆಗಳು ದೇಶದ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಎಸ್‌ಐಆರ್ ಬಗ್ಗೆ ನಡೆದುಕೊಳ್ಳುತ್ತಿರುವ ವ್ಯವಸ್ಥೆಯ ಬಗ್ಗೆ ಬರೆಯುತ್ತೇವೆ. ಈ ದೇಶದ ಕೆಲ ಪತ್ರಿಕೆಗಳು ಮಾದ್ಯಮಗಳು ದೆಹಲಿ ಎಲ್ಲಿ ನಡೆಯುತ್ತಿರುವ ಎಸ್‌ಐಆರ್ ವಿರೋದಿ ಹೋರಾಟವನ್ನು ತೋರಿಸದೇ ಇರುವುದು ಗಮನಿಸುತ್ತೀದ್ದೇವೆ ಎಂದರು.

ನಂತರ ದಪ್ಪರ್ತಿ ನಂಜುಂಡ ಮಾತನಾಡಿ ಎಸ್‌ಐಆರ್ ನಿಂದ ದೇಶವೇ ಅಲ್ಲೋಲ ಕಲ್ಲೋಲ ಆಗುವಂತಾಗಿದೆ.

ಎಸ್‌ಐಆರ್ ನ್ನು ರದ್ದುಮಾಡಬೇಕು ಜ್ಞಾನೇಶ್ ಕುಮಾರ್ ರವರು ಕೂಡಲೇ ರಾಜೀನಾಮೆಯನ್ನು ನೀಡಬೇಕು. ದೆಹಲಿಯಲ್ಲಿ ನಿರಂತರವಾಗಿ ಇಂಡಿಯಾ ಕೂಟವು ದೊಡ್ಡಮಟ್ಟದಲ್ಲಿ ಪ್ರತಿಭಟನೆಯ ಮೂಲಕ ಪ್ರತಿರೋಧವನ್ನು ವ್ಯಕ್ತಪಡಿಸುತ್ತಿದ್ದರು. ಕೇಂದ್ರದ ಬಿಜೆಪಿ ಸರ್ಕಾರ ಕಿವಿಯನ್ನು ಸಹ ಕೊಟ್ಟು ಕೇಳಿಸಿಕೊಳ್ಳದೇ ಆಗಿದೆ ಎಂದರು.

ಈ ಸಂದರ್ಭದಲ್ಲಿ ಮತಕಾವಲು ಸಮಿತಿಯ ನಾರಾಯಣಸ್ವಾಮಿ, ಚನ್ನರಾಯಪ್ಪ, ನಾಗರಾಜು , ರಿಯಾಜ್, ಗುರುಮೂರ್ತಿ, ರಹಮತ್ ವುಲ್ಲಾ, ಯುವ ಕಾಂಗ್ರೆಸ್ ಕಾರ್ಯದರ್ಶಿ ಬಾಲೇನಹಳ್ಳಿ ರಮೇಶ್, ಧೂಮಕುಂಟಹಳ್ಳಿ ಮೂರ್ತಿ, ಕಾಲುವಗಡ್ಡಹಳ್ಳಿ ಮುರಳಿ ನಾರಾಯಣ ಸ್ವಾಮಿ, ಗಂಗರಾಜು ಸೇರಿದ್ದಂತೆ ಇನ್ನಿತರರು ಭಾಗವಹಿಸಿದ್ದರು.

## ಬೆಂಗಳೂರು ಉತ್ತರ ವಿವಿ ಅಂತರ ಕಾಲೇಜು ಗುಡ್ಡಗಾಡು ಓಟ ಸ್ಪರ್ಧೆ
## 10 ಕಿ.ಮೀ. ಗುಡ್ಡಗಾಡು ಓಟ ಬೆಂಗಳೂರು ಉತ್ತರ ವಿವಿ ಕ್ರೀಡಾಕೂಟ

**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಭಾಗ್ಯನಗರ:** 2026-27 ನೇ ಸಾಲಿನ ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ಅಂತರ ಕಾಲೇಜು 10 ಕಿ.ಮೀ ಗುಡ್ಡಗಾಡು ಓಟ ಪುರುಷ ಮತ್ತು ಮಹಿಳೆಯರಿಗೆ ಹಾಗೂ ಅಂತರ ವಿಶ್ವವಿದ್ಯಾಲಯ ಆಯ್ಕೆ ಪ್ರಕ್ರಿಯೆ ಇಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆಯಿತು. ಈ ಕ್ರೀಡಾಕೂಟದಲ್ಲಿ ಒಟ್ಟು 21 ಕಾಲೇಜಿನಿಂದ 70 ಪುರುಷ ಕ್ರೀಡಾಪಟುಗಳು ಹಾಗೂ 55 ಮಹಿಳಾ ಕ್ರೀಡಾಪಟುಗಳು ಭಾಗವಹಿಸಿದ್ದರು.

ಇದರಲ್ಲಿ ಪುರುಷ ತಂಡದ ವಿಜೇತರಾಗಿ ಪ್ರಥಮ ಸ್ಥಾನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ದೊಡ್ಡಬಳ್ಳಾಪುರ ಹಾಗೂ ಎರಡನೇ ಸ್ಥಾನವನ್ನು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕೆಆರ್ ಪುರಂ ಬೆಂಗಳೂರು ಕಾಲೇಜಿನ ವಿದ್ಯಾರ್ಥಿಗಳು ಪ್ರಶಸ್ತಿಯನ್ನು ಪಡೆದುಕೊಂಡರು.

ಮಹಿಳೆಯರ ವಿಭಾಗದಲ್ಲಿ ಪ್ರಥಮ ಸ್ಥಾನ ಸರ್ಕಾರಿ ಮಹಿಳಾ ಕಾಲೇಜು ಕೋಲಾರ ಹಾಗು ಎರಡನೇ ಸ್ಥಾನವನ್ನು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಬಂಗಾರಪೇಟೆ ಕ್ರೀಡಾಪಟುಗಳು ಪಡೆದುಕೊಂಡಿದ್ದಾರೆ. ಗುಡ್ಡಗಾಡು ಓಟದ ಕಾರ್ಯಕ್ರಮದ ಉದ್ಘಾಟನೆಯನ್ನುಪೊಲೀಸ್ ಇನ್ಸ್‌ಪೆಕ್ಟರ್ ಅಜಯ್ ಸಾರಥಿ, ತಾಲೂಕು ಆರೋಗ್ಯ ಅಧಿಕಾರಿ ಡಾ.ಸಿ.ಎನ್. ಸತ್ಯನಾರಾಯಣ ರೆಡ್ಡಿ, ನಿರ್ದೇಶಕರು ದೈಹಿಕ ಶಿಕ್ಷಣ ನಿರ್ದೇಶನಾಲಯ ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ಡಾ.ಶ್ರೀಕಾಂತ್ ಆರ್ ಭಾಗವಹಿಸಿದ್ದರು.




ಈ ಕಾರ್ಯಕ್ರಮದಲ್ಲಿ ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರು ಡಾ.ನಾಗರಾಜ್ ಎಚ್.ಆರ್ ಹಾಗೂ ಸಿಬ್ಬಂದಿ ವರ್ಗದವರಾದ ಹಿರಿಯ ಉಪನ್ಯಾಸಕರು ಪ್ರೊ. ಮುರಳಿ ಆನಂದ್ ಪ್ರೊ.ಮಂಜುನಾಥ್. ಪ್ರೊ. ಬಿ ತಾಜ್ ಉನ್ನಿಸಾ, ಪ್ರೊ. ಪಂಚಾಂಗಂ ಹರಿ ಕುಮಾರ್, ಮುನಿಕೃಷ್ಣಪ್ಪ, ಡಾ.ಶೃತಿ, ದೈಹಿಕ ಶಿಕ್ಷಣ ನಿರ್ದೇಶಕರು ಡಾ.ಪ್ರವೀಣ್ .ಎಂ ಹಾಗೂ ಕಾಲೇಜಿನ ಆಡಳಿತ ಸಿಬ್ಬಂದಿ ಹಾಗೂ ಅತಿಥಿ ಉಪನ್ಯಾಸಕರು ಭಾಗವಹಿಸಿದ್ದರು.

# ಪ್ರತಿಭಟನೆಗಳ ವರದಿಗಾರಿಕೆಗೆ ಭಾರತೀಯ ಪ್ರೆಸ್ ಕೌನ್ಸಿಲ್‌ನಿಂದ ನೂತನ ಮಾರ್ಗದರ್ಶಿ ಸೂತ್ರಗಳ ಬಿಡುಗಡೆ

ಬೆಂಗಳೂರು, : ಪ್ರತಿಭಟನೆಗಳು ಮತ್ತು ಧರಣಿ ಸತ್ಯಾಗ್ರಹಗಳ ಸಂದರ್ಭದಲ್ಲಿ ಪತ್ರಕರ್ತರ ಸುರಕ್ಷತೆಯನ್ನು ಕಾಯ್ದುಕೊಳ್ಳಲು, ಜವಾಬ್ದಾರಿಯುತ ವರದಿಗಾರಿಕೆಯನ್ನು ಉತ್ತೇಜಿಸಲು ಹಾಗೂ ಮಾಧ್ಯಮ ಸಿಬ್ಬಂದಿ ಮತ್ತು ಕಾನೂನು ಜಾರಿ ಸಂಸ್ಥೆಗಳ ನಡುವೆ ಉತ್ತಮ ಸಮನ್ವಯ ಮೂಡಿಸಲು ಭಾರತೀಯ ಪ್ರೆಸ್ ಕೌನ್ಸಿಲ್ (ಕಲಖ) ನೂತನ ಮಾರ್ಗದರ್ಶಿ ಸೂತ್ರಗಳನ್ನು ಹೊರಡಿಸಿದೆ. 2026ರ ಅಕ್ಟೋಬರ್ 14ರಂದು ನಡೆದ ಸಭೆಯಲ್ಲಿ ಈ ಸಮ್ಮತಿಯನ್ನು ಪಡೆದುಕೊಂಡಿದ್ದು, ಅಕ್ಟೋಬರ್ 15ರಂದು ಅಧಿಕೃತವಾಗಿ ಪ್ರಕಟಿಸಲಾಗಿದೆ.

ಮಾರ್ಗದರ್ಶಿ ಸೂತ್ರಗಳ ಪ್ರಮುಖ ಅಂಶಗಳು:

ಗುರುತಿಸುವಿಕೆ ಮತ್ತು ವೃತ್ತಿಪರ ನಡವಳಿಕೆ :

ಪತ್ರಕರ್ತರು ತಮ್ಮ ಸಂಸ್ಥೆ ನೀಡಿದ ಮಾನ್ಯತೆ ಪಡೆದ ಗುರುತಿನ ಚೀಟಿಯನ್ನು (ID card) ಅಥವಾ PIB/DIPR ಗುರುತಿನ ಚೀಟಿಯನ್ನು ಸ್ಪಷ್ಟವಾಗಿ ಕಾಣಿಸುವಂತೆ ಧರಿಸಿರಬೇಕು.

ಪೊಲೀಸರು ವಿಚಾರಿಸಿದಾಗ ಶಾಂತಿಯುತವಾಗಿ ತಮ್ಮ ಪತ್ರಕರ್ತ ಗುರುತನ್ನು ತಿಳಿಸಬೇಕು.

ವರದಿಗಾರಿಕೆಯಲ್ಲಿ ತಟಸ್ಥತೆ ಮತ್ತು ವೃತ್ತಿಪರತೆಯನ್ನು ಕಾಯ್ದುಕೊಳ್ಳಬೇಕು.

ಪ್ರತಿಭಟನೆಗಳಲ್ಲಿ ಭಾಗವಹಿಸುವುದು, ಪ್ರಚೋದನೆ ನೀಡುವುದು ಅಥವಾ ಪೊಲೀಸ್ ಕಾರ್ಯಾಚರಣೆಗೆ ಅಡ್ಡಿಪಡಿಸುವುದನ್ನು ಮಾಡಬಾರದು.

ಸ್ಥಳಾವಕಾಶ ಮತ್ತು ಜನಸಂದಣಿಯಲ್ಲಿ ಸುರಕ್ಷತೆ :

ಸಂಘರ್ಷ ನಡೆಯುವ ಸ್ಥಳಗಳಿಂದ ಸುರಕ್ಷಿತ ಅಂತರ ಕಾಯ್ದುಕೊಳ್ಳಬೇಕು.

ಕ್ಯಾಮೆರಾ ಅಥವಾ ರೆಕಾರ್ಡಿಂಗ್ ಉಪಕರಣಗಳನ್ನು ಪೊಲೀಸ್ ಬ್ಯಾರಿಕೇಡ್‌ಗಳಿಗೆ ಅಥವಾ ವಾಹನಗಳಿಗೆ ಅಳವಡಿಸಿ ಸಂಚಾರಕ್ಕೆ ಅಡ್ಡಿಪಡಿಸಬಾರದು.

ಕಾಲ್ತುಳಿತ ತಪ್ಪಿಸಲು ಸಣ್ಣ ಹೆಜ್ಜೆಗಳನ್ನಿಡುತ್ತಾ ಎಚ್ಚರಿಕೆಯಿಂದ ಚಲಿಸಬೇಕು.

ಪರಿಸ್ಥಿತಿಯ ಜಾಗೃತಿ ಮತ್ತು ನಿರ್ಗಮನ ಯೋಜನೆ :

ಜನಸಂದಣಿಯ ನಡವಳಿಕೆ, ಗಲಾಟೆ ಹಾಗೂ ಆಸುಪಾಸಿನ ಅಪಾಯಗಳನ್ನು ನಿರಂತರವಾಗಿ ಗಮನಿಸುತ್ತಿರಬೇಕು.

ಆಕಸ್ಮಿಕವಾಗಿ ಸ್ಥಳದಿಂದ ಹೊರಹೋಗಲು ತುರ್ತು ನಿರ್ಗಮನ ಮಾರ್ಗಗಳನ್ನು (Escape routes) ಸದಾ ಸಿದ್ಧವಾಗಿಟ್ಟುಕೊಳ್ಳಬೇಕು.

ವ್ಯಕ್ತಿಗತ ಸುರಕ್ಷತಾ ಕ್ರಮಗಳು ಮತ್ತು ಪ್ರಥಮ ಚಿಕಿತ್ಸೆ :

ಪತ್ರಕರ್ತರು ತಮ್ಮ ಬಳಿ ಪ್ರಥಮ ಚಿಕಿತ್ಸಾ ಕಿಟ್, ನಿತ್ಯದ ಔಷಧಗಳು, ಕುಡಿಯುವ ನೀರು,

ಪ್ರೋಟೀನ್ ಆಹಾರ, ಟಾರ್ಚ್, ಮುಖ ಒರೆಸುವ ಬಟ್ಟೆ ಮತ್ತು ಕಣ್ಣಿನ ರಕ್ಷಣಾ ಗ್ಲಾಸ್‌ಗಳನ್ನು ಒಳಗೊಂಡ 'ಎಮರ್ಜೆನ್ಸಿ ಕಿಟ್' ಇಟ್ಟುಕೊಳ್ಳಬೇಕು.

ಕಣ್ಣೀರು ಅನಿಲ (Tear-gas) ಅಥವಾ ಹೊಗೆಬಾಂಬ್‌ಗಳನ್ನು ಕೈಯಿಂದ ಮುಟ್ಟುವುದು ಅಥವಾ ಎಸೆಯಲು ಯತ್ನಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಸಮನ್ವಯ ಮತ್ತು ಸಂಪರ್ಕ :

ವರದಿಗಾರರು ತಮ್ಮ ಸುದ್ದಿ ಸಂಸ್ಥೆಗಳ (Newsrooms) ಜೊತೆ ನಿರಂತರ ಸಂಪರ್ಕದಲ್ಲಿರಬೇಕು.

ಫ್ರೀಲ್ಯಾನ್ಸ್ ಪತ್ರಕರ್ತರು ತಮ್ಮ ಕಾರ್ಯಯೋಜನೆ ಮತ್ತು ಕೆಲಸ ಮಾಡುವ ಸ್ಥಳದ ಮಾಹಿತಿಯನ್ನು ಸಂಪಾದಕರಿಗೆ ಅಥವಾ ಆಪ್ತರಿಗೆ ತಿಳಿಸಿರಬೇಕು.

ಸಹೋದ್ಯೋಗಿ ಪತ್ರಕರ್ತರ ಸುರಕ್ಷತೆಯ ಬಗ್ಗೆಯೂ ಗಮನಹರಿಸಬೇಕು.

ನೈತಿಕ ಮತ್ತು ಜವಾಬ್ದಾರಿಯುತ ವರದಿಗಾರಿಕೆ :

ಘಟನೆಗಳನ್ನು ನಿಖರವಾಗಿ, ವಸ್ತುನಿಷ್ಠವಾಗಿ ಮತ್ತು ನಿಷ್ಪಕ್ಷಪಾತವಾಗಿ ವರದಿ ಮಾಡಬೇಕು.

ಸಂತ್ರಸ್ತರು, ಅಪ್ರಾಪ್ತ ವಯಸ್ಕರು ಹಾಗೂ ಗಾಯಗೊಂಡವರ ಫೋಟೋ ಅಥವಾ ವೀಡಿಯೊ ಪ್ರಸಾರ ಮಾಡುವಾಗ ಅವರ ಖಾಸಗಿತನ ಮತ್ತು ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಳ್ಳಬೇಕು.

ಪೊಲೀಸರ ರಹಸ್ಯ ಕಾರ್ಯಾಚರಣೆ, ಸಾಗುವ ಮಾರ್ಗಗಳು ಅಥವಾ ತಂತ್ರಗಳನ್ನು ರಿಯಲ್-ಟೈಮ್‌ನಲ್ಲಿ ಪ್ರಸಾರ ಮಾಡಬಾರದು.

# 2025ನೇ ಸಾಲಿನ ರಂಗಭೂಮಿ ಆಕರ ಗ್ರಂಥಗಳ ಪುಸ್ತಕ ಬಹುಮಾನಕ್ಕೆ ಲೇಖಕರಿಂದ ಅರ್ಜಿ ಆಹ್ವಾನ

ಬೆಂಗಳೂರು, : ಕರ್ನಾಟಕ ನಾಟಕ ಅಕಾಡೆಮಿಯು 2025ನೇ ಸಾಲಿನಲ್ಲಿ ಪ್ರಕಟವಾದ ರಂಗಭೂಮಿಗೆ ಸಂಬಂಧಿಸಿದ ಆಕರ ಗ್ರಂಥಗಳಿಗೆ ಪುಸ್ತಕ ಬಹುಮಾನವನ್ನು ನೀಡಲು ನಿರ್ಧರಿಸಿದೆ. ಕನ್ನಡ ರಂಗಭೂಮಿಯ ಬೆಳವಣಿಗೆ, ವೈವಿಧ್ಯತೆ ಹಾಗೂ ಇತಿಹಾಸವನ್ನು ತಿಳಿಸುವ ವಿಮರ್ಶಾತ್ಮಕ ಕೃತಿಗಳಿಂದ ಈ ಬಹುಮಾನಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಬಹುಮಾನದ ಮೊತ್ತ ರೂ. 25,000/- ನಿಗದಿಪಡಿಸಲಾಗಿದೆ. ಆಸಕ್ತ ಲೇಖಕರು ತಮ್ಮ ಹೆಸರು, ವಿಳಾಸ ಮತ್ತು ಪ್ರಕಟಣೆಯ ವರ್ಷವನ್ನು ನೀಡಿ, ಪುಸ್ತಕದ ನಾಲ್ಕು ಪ್ರತಿಗಳೊಂದಿಗೆ ನೇರವಾಗಿ ಅಕಾಡೆಮಿಗೆ ಕಳುಹಿಸಿಕೊಡಬೇಕು. ಅರ್ಜಿ ಸಲ್ಲಿಸಲು 2026 ನೇ ಅಕ್ಟೋಬರ್ 31 ಕೊನೆಯ ದಿನವಾಗಿರುತ್ತದೆ.

ಪ್ರಮುಖ ನಿಯಮಗಳು ಮತ್ತು ನಿಬಂಧನೆಗಳು: ಕೃತಿಗಳು ಜನವರಿ 2025ರಿಂದ ಡಿಸೆಂಬರ್ 2025ರೊಳಗೆ ಮುದ್ರಣವಾದ ಮೊದಲ ಪ್ರಕಟಣೆಯಾಗಿರಬೇಕು. ಅನುವಾದಿತ ಕೃತಿಗಳು, ನಾಟಕಗಳು, ಮರುಮುದ್ರಣಗೊಂಡ ಪುಸ್ತಕಗಳು ಹಾಗೂ ಸಂಪಾದಿತ ಕೃತಿಗಳಿಗೆ ಅವಕಾಶವಿರುವುದಿಲ್ಲ.

ಪುಸ್ತಕಗಳು ಯಾವುದೇ ಪದವಿಗಾಗಿ, ಪಿಹೆಚ್‌ಡಿಗಾಗಿ ಅಥವಾ ಪಠ್ಯ ಪುಸ್ತಕಕ್ಕಾಗಿ ಸಿದ್ಧಪಡಿಸಿದ ವಿಷಯವಾಗಿರಬಾರದು. ಕೃತಿಯು ಕನಿಷ್ಠ 60 ಪುಟಗಳನ್ನು ಹೊಂದಿರಬೇಕು ಮತ್ತು ಕೃತಿಯ ತಾಂತ್ರಿಕ ಪುಟದಲ್ಲಿ ಮುದ್ರಣ ವರ್ಷವನ್ನು ನಮೂದಿಸಿರಬೇಕು. ಅಕಾಡೆಮಿಯ ಸದಸ್ಯರು ರಚಿಸಿದ ಕೃತಿಗಳು ಈ ಬಹುಮಾನಕ್ಕೆ ಅರ್ಹವಾಗಿರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ರಿಜಿಸ್ಟ್ರಾರ್, ಕರ್ನಾಟಕ ನಾಟಕ ಅಕಾಡೆಮಿ, ಬೆಂಗಳೂರು-560002 ಅಥವಾ ದೂರವಾಣಿ ಸಂಖ್ಯೆ 08022244176 ಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಸರಳ ವಿವಾಹ ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನ

ಚಿಕ್ಕಬಳ್ಳಾಪುರ, : ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದ (ಮುಸ್ಲಿಂ, ಕ್ರಿಶ್ಚಿಯನ್. ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ) ಸರಳ ವಿವಾಹಕ್ಕೆ ಪ್ರೋತ್ಸಾಹ ನೀಡಲು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುವ ಸಮೂಹ ವಿವಾಹಗಳ ವೆಚ್ಚಗಳಿಗಾಗಿ ಪ್ರತಿ ಜೊಡಿಗೆ ರೂ.50.00 ಸಾವಿರ ನೀಡುವ ಕಾರ್ಯಕ್ರಮಕ್ಕೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಷರತ್ತುಗಳು

1. ಅರ್ಜಿ ಸಲ್ಲಿಸುವ ವಧು-ವರರು ಕರ್ನಾಟಕ ರಾಜ್ಯಕ್ಕೆ ಸೇರಿದ ಅಲ್ಪಸಂಖ್ಯಾತರ ಸಮುದಾಯಗಳಿಗೆ (ಮುಸ್ಲಿಂ, ಕ್ರಿಶ್ಚಿಯನ್. ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ) ಸೇರಿದವಾಗಿರಬೇಕು.

2. ಸಮೂಹಿಕ ವಿವಾಹಗಳಲ್ಲಿ ಕನಿಷ್ಠ 05 ಜೋಡಿಗಳು ಭಾಗವಹಿಸಿರತಕ್ಕದ್ದು.

3. ಈ ಸೌಲಭ್ಯ ಪಡೆಯುವ ವಧುವಿಗೆ ಕನಿಷ್ಠ 18 ವರ್ಷದಿಂದ ಗರಿಷ್ಠ 42 ವರ್ಷಗಳು, ವರನಿಗೆ ಕನಿಷ್ಠ 21 ವರ್ಷದಿಂದ ಗರಿಷ್ಠ 45 ವರ್ಷ ವಯಸ್ಸು ಆಗಿರತಕ್ಕದ್ದು.

4. ಈ ಯೋಜನೆಯಡಿ ಸಹಾಯಧನ ಪಡೆಯಲು ವಧು ವರರ ಒಟ್ಟು ವಾರ್ಷಿಕ ಆದಾಯವು ರೂ 5.00 ಲಕ್ಷಗಳನ್ನು ಮೀರತಕ್ಕದಲ್ಲ.

5. ಈ ಸೌಲಭ್ಯವನ್ನು ಜೀವನದಲ್ಲಿ ಒಮ್ಮೆ ಮಾತ್ರ ಪಡೆಯಬಹುದಾಗಿದೆ.

6. ವರನಿಗೆ ಈಗಾಗಲೇ ಜೀವಂತ ಪತ್ನಿಯಿದ್ದಲ್ಲಿ ಅಥವಾ ವಧುವಿಗೆ ಜೀವಂತ ಪತಿ ಇದ್ದಲ್ಲಿ ಈ ಯೋಜನೆಯು ಅನ್ವಯಿಸುವುದಿಲ್ಲ.

7. ಒಂದು ಕುಟುಂಬದಲ್ಲಿ ಒಬ್ಬರಿಗೆ ಮಾತ್ರ ಈ ಯೋಜನೆಯ ಸೌಲಭ್ಯ ನೀಡಲಾಗುವುದು.

8. ಜಿಲ್ಲಾ ನೋಂದಣಿ/ವಕ್ಫ್ ಬೋರ್ಡ್ ಕಚೇರಿಗಳಲ್ಲಿ ನೋಂದಣಿಯಾಗಿರುವ ಖಾಸಗಿ ಟ್ರಸ್ಟ್‌ಗಳು ಸಂಘಗಳು, ವಕ್ಫ್ ಸಂಸ್ಥೆಗಳು ಮತ್ತು ಖಾಸಗಿ ವ್ಯಕ್ತಿಗಳು ಸಮಾಜ ಸೇವೆ ಮಾಡುವ ವ್ಯಕ್ತಿಗಳು ನಡೆಸುವ ಸಾಮೂಹಿಕ ವಿವಾಹ ಕಾರ್ಯಕ್ರಮಗಳಲ್ಲಿ ವಿವಾಹವಾದಲ್ಲಿ ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

9. ಸಾಮೂಹಿಕ ವಿವಾಹ ಕಾರ್ಯಕ್ರಮದ ಫೋಟೋ ಹಾಗೂ ವಧು-ವರನ ಜಂಟಿ ಭಾವಚಿತ್ರಗಳನ್ನು ಸಲ್ಲಿಸುವುದು.

10. ಮಂಜೂರಾದ ಪ್ರೋತ್ಸಾಹಧನದ ಹಣವನ್ನು ವಧುವಿನ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುವುದು.

11. ಸಾಮೂಹಿಕ ವಿವಾಹಗಳನ್ನು ಏರ್ಪಡಿಸುವ ಆಯೋಜಕರಿಗೆ ಪ್ರೋತ್ಸಾಹ ಹಾಗೂ ವಿವಾಹದ ಖರ್ಚು-ವೆಚ್ಚಗಳಿಗಾಗಿ ಪ್ರತಿ ಜೋಡಿಗೆ ರೂ.5000/-ಗಳನ್ನು ನೀಡಲಾಗುವುದು.

12. ಸಾಮೂಹಿಕ ವಿವಾಹಗಳನ್ನು ಏರ್ಪಡಿಸುವ ಆಯೋಜಕರುಗಳು ಸದರಿ ಕಾರ್ಯಕ್ರಮದ ಏಳು ದಿನ ಮುಂಚಿತವಾಗಿ ಕಾರ್ಯಕ್ರಮ ಆಯೋಜನೆಯ ಬಗ್ಗೆ ಅರ್ಜಿ ಸಲ್ಲಿಸುವುದು ಮತ್ತು ವಿವಾಹ ನಡೆದ ದಿನಾಂಕದದಿಂದ 3 ದಿನಗಳೊಳಗಾಗಿ ಅಗತ್ಯ ದಾಖಲಾತಿಗಳನ್ನು ಸಂಬಂಧಪಟ್ಟ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕಚೇರಿಗೆ ಸಲ್ಲಿಸುವುದು.

ಸರಳ ವಿವಾಹಕ್ಕೆ ಪ್ರೋತ್ಸಾಹಧನ ಪಡೆಯಲು ಇಲಾಖಾ ವೆಬ್ ಸೈಟ್ ನಲ್ಲಿ https://dom.karnataka.gov.in ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳ ಕಚೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಕೊಠಡಿ ಸಂಖ್ಯೆ:ಎಸ್.ಎ-08, 2ನೇ ಮಹಡಿ ಜಿಲ್ಲಾಡಳಿತ ಭವನ ಚಿಕ್ಕಬಳ್ಳಾಪುರ, ದೂರವಾಣಿ ಸಂಖ್ಯೆ : 08156-277049 ಇಲ್ಲಿ ಸಂಪರ್ಕಿಸಬಹುದೆಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಸಾಧ್ಯವಾದುದು ಯಾವುದು ಇಲ್ಲ: ಹಾಕಿ ಕಣದ ಸಾಧಕಿ ಸುನಿತಾ ಪುನಿಯಾ ಸ್ಫೂರ್ತಿದಾಯಕ ಯಶೋಗಾಥೆ!



ಹುಳಿಯಾರು: ಹುಳಿಯಾರಿನ ಬಿ.ಎಂ.ಎಸ್. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 2026-27ನೇ ಸಾಲಿನ ಕ್ರೀಡಾ, ಸಾಂಸ್ಕೃತಿಕ ಹಾಗೂ ವಿವಿಧ ಚಟುವಟಿಕೆಗಳ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ತುಮಕೂರು ವಿಶ್ವವಿದ್ಯಾನಿಲಯದ ಕುಲಸಚಿವರಾದ ಎಚ್.ಎಸ್.ಮೋಹನ್ ಅವರು, ವಿದ್ಯಾರ್ಥಿಗಳಲ್ಲಿ ಸ್ಫೂರ್ತಿ ತುಂಬಲು ಒಲಿಂಪಿಕ್ಸ್ ಹಾಕಿ ಕ್ರೀಡಾಂಗಣದ ಗೋಲ್‌ಕೀಪರ್ ಸುನಿತಾ ಪುನಿಯಾ ಅವರ ಜೀವನದ ರೋಚಕ ಹಾಗೂ ಸ್ಫೂರ್ತಿದಾಯಕ ಉದಾಹರಣೆಯನ್ನು ನೀಡಿದರು.

ಬಡತನದ ಬೇಗೆಯನ್ನು ಮೆಟ್ಟಿನಿಂತು ಚಿನ್ನ ಗೆದ್ದ ಧೀರ ಮಹಿಳೆ!

ಒಲಿಂಪಿಕ್ಸ್‌ನ ಹಾಕಿ ಪಂದ್ಯದಲ್ಲಿ ಭಾರತೀಯ ಮಹಿಳಾ ತಂಡವು ಫೈನಲ್ ಪ್ರವೇಶಿಸುವಲ್ಲಿ ಗೋಲ್‌ಕೀಪರ್ ಸುನಿತಾ ಪುನಿಯಾ ಅವರ ಪಾತ್ರ ಹಿರಿದಾದದ್ದು. ಅತಿ ಸಾಮಾನ್ಯ ಮತ್ತು ತೀರಾ ಬಡತನದ ಹಿನ್ನೆಲೆಯಿಂದ ಬಂದಿದ್ದ ಆಕೆಯ ಬಳಿ, ರಾಷ್ಟ್ರೀಯ ಮಟ್ಟದ ಪಂದ್ಯಕ್ಕಾಗಿ ಹಾಕಿಯ ಒಂದು ಸ್ಟಿಕ್ ಖರೀದಿಸಲು ಸಹ ಹಣವಿರಲಿಲ್ಲ. ಆದರೆ ಪರಿಸ್ಥಿತಿಗೆ ಶರಣಾಗದೆ, ಮರದ ತುಂಡನ್ನೇ ಸ್ಟಿಕ್ ಮಾಡಿಕೊಂಡು ಅದೆಷ್ಟೋ ಗಂಟೆಗಳ ಕಾಲ ಕಠಿಣ ಅಭ್ಯಾಸ ನಡೆಸಿದ್ದರು.

ಕೈಯಲ್ಲಿ ದುಡ್ಡಿಲ್ಲದಿದ್ದರೂ, ಗುರಿ ಮುಟ್ಟುವ ಛಲವೊಂದಿದ್ದರೆ ಬಡತನ ಸಾಧನೆಗೆ ಎಂದಿಗೂ ಅಡ್ಡಿಯಾಗುವುದಿಲ್ಲ ಎಂಬುದನ್ನು ಸಾಬೀತುಪಡಿಸಿದ ಸುನಿತಾ ಪುನಿಯಾ, ಇಂದು ವಿಶ್ವದ ಅತ್ಯುತ್ತಮ ಗೋಲ್‌ಕೀಪರ್‌ಗಳಲ್ಲಿ ಒಬ್ಬರಾಗಿ ಹೊರಹೊಮ್ಮಿದ್ದಾರೆ. "ಅಂತಹ ಹೆಣ್ಣುಮಕ್ಕಳಿಗೆ ಸಾಧ್ಯವಾಗಿದ್ದು, ನಮಗೇಕೆ ಸಾಧ್ಯವಿಲ್ಲ? ನಿಮ್ಮ ಕಣ್ಣುಗಳಲ್ಲಿ ವಿಶ್ವಾಸವಿರಲಿ, ಆತ್ಮವಿಶ್ವಾಸವೇ ನಿಮ್ಮ ಅಸ್ತ್ರವಾಗಲಿ" ಎಂದು ಎಚ್.ಎಸ್. ಮೋಹನ್ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

**ವಿದ್ಯಾರ್ಥಿಗಳಿಗೆ ಸ್ಫೂರ್ತಿಯ ಸಂದೇಶ**

ಜೀವನದಲ್ಲಿ ಯಾವುದೇ ಸವಾಲುಗಳು ಎದುರಾದರೂ "ನನ್ನಿಂದ ಇದು ಸಾಧ್ಯವಿಲ್ಲ, ನನ್ನ ಬಳಿ ಸಂಪನ್ಮೂಲಗಳಿಲ್ಲ" ಎಂದು ಹಿಂದೆ ಸರಿಯಬಾರದು. ಸಾಧನೆಗೆ ಬೇಕಾಗಿರುವುದು ಹಣ ಅಥವಾ ಸೌಕರ್ಯಗಳಲ್ಲ, ಬದಲಾಗಿ ಅಚಲವಾದ ಛಲ ಮತ್ತು ನಿರಂತರ ಪರಿಶ್ರಮ. ಸುನಿತಾ ಪುನಿಯಾ ಅವರ ಈ ಸ್ಫೂರ್ತಿದಾಯಕ ಕಥೆಯು ಪ್ರತಿಯೊಬ್ಬ ವಿದ್ಯಾರ್ಥಿಯಲ್ಲೂ ಹೊಸ ಉತ್ಸಾಹವನ್ನು ತುಂಬುವಂತಿದ್ದು, ಬದುಕಿನ ಕಷ್ಟಗಳನ್ನು ಮೆಟ್ಟಿನಿಂತು ಯಶಸ್ಸಿನ ಶಿಖರವೇರಲು ಪ್ರೇರಣೆಯಾಗಿದೆ. ವಿದ್ಯಾರ್ಥಿಗಳು ತಮ್ಮ ಬದುಕಿನಲ್ಲಿ ಉನ್ನತ ಕನಸುಗಳನ್ನು ಕಟ್ಟಿಕೊಂಡು, ಕಠಿಣ ಪರಿಶ್ರಮ ಹಾಗೂ ಛಲದಿಂದ ಗುರಿ ಸಾಧಿಸಬೇಕು ಎಂದು ಕರೆ ನೀಡಿದರು.

ಹೊಸ ಕನಸುಗಳೊಂದಿಗೆ ಬದುಕು ರೂಪಿಸಿಕೊಳ್ಳಿ

ನಾನಾ ಆರ್ಥಿಕ ಹಾಗೂ ಸಾಮಾಜಿಕ ಹಿನ್ನೆಲೆಗಳಿಂದ ಬರುವ ವಿದ್ಯಾರ್ಥಿಗಳು ತಮ್ಮ ಮನಸ್ಸಿನಲ್ಲಿ ಹಲವು ಕನಸುಗಳನ್ನು, ಆಶಯಗಳನ್ನು ಹೊತ್ತುಕೊಂಡು ಕಾಲೇಜಿಗೆ ಬಂದಿರುತ್ತಾರೆ. ಆದರೆ ಯಾವುದೇ ಕಾಲೇಜು ಅಥವಾ ವಿದ್ಯಾಲಯ ತಾನೇ ತಾನಾಗಿ ಎಲ್ಲವನ್ನೂ ಕೊಡುವುದಿಲ್ಲ. ನಿಮ್ಮ ಆಸಕ್ತಿ, ಹಂಬಲ, ಆಶಯ ಮತ್ತು ಉತ್ಸಾಹದ ಮೂಲಕ ನೀವು ಇಲ್ಲಿನ ಉಪನ್ಯಾಸಕರೊಡನೆ ಹಾಗೂ ಅಧ್ಯಾಪಕರೊಡನೆ ಹೊಂದಿರುವ ಒಡನಾಟದ ಮೂಲಕ ಹೊಸ ಸಾಧ್ಯತೆಗಳನ್ನು ಸೃಷ್ಟಿಸಿಕೊಳ್ಳಬೇಕು ಎಂದರು.

**ಪೋಷಕರ ಶ್ರಮ ಹಾಗೂ ತ್ಯಾಗವನ್ನು ಸ್ಮರಿಸಿ**

ಪ್ರತಿ ತರಗತಿಯಲ್ಲೂ ವಿದ್ಯಾರ್ಥಿಗಳು ತಮ್ಮ ತಂದೆ-ತಾಯಿಯವರ ಕಷ್ಟವನ್ನು ನೆನಪಿಸಿಕೊಳ್ಳಬೇಕು. ನಿಮ್ಮನ್ನು ಓದಿಸಲು ಅವರು ಪಡುವ ಶ್ರಮ, ಬೆವರು ಹಾಗೂ ಅವರ ಕಣ್ಣುಗಳಲ್ಲಿರುವ ಕನಸುಗಳನ್ನು ವಿದ್ಯಾರ್ಥಿಗಳು ಅರ್ಥಮಾಡಿಕೊಳ್ಳಬೇಕು. ನಿದ್ರಾಹಾರ ಬದಿಗಿಟ್ಟು ದುಡಿದು ನಿಮ್ಮನ್ನು ಕಾಲೇಜಿಗೆ ಕಳುಹಿಸಿರುವ ಪೋಷಕರ ಆಶಯಗಳಿಗೆ ತಕ್ಕಂತೆ ನಡೆದುಕೊಳ್ಳುವುದು ಪ್ರತಿಯೊಬ್ಬ ವಿದ್ಯಾರ್ಥಿಯ ಆದ್ಯ ಕರ್ತವ್ಯವಾಗಿದೆ ಎಂದು ಅವರು ಒತ್ತು ನೀಡಿ ಹೇಳಿದರು.

ಜಗತ್ತಿಗೆ ಬೆಳಕಾಗಬೇಕು, ಬೆಂಕಿಯಾಗಬಾರದು

"ಆಚಾರಕ್ಕೆ ಅರಸಾಗು, ನೀತಿಗೆ ಪ್ರಭುವಾಗು, ಮಾತಿನಲ್ಲಿಯೂ ಹಾಗೂ ಮಾಣಿಕ್ಯದ ನುಡಿಯಾಗಿ ನೀನು ಜಗತ್ತೆಲ್ಲಾ ಬೆಳಕಾಗು ನೀನು ಜಗತ್ತಿಗೆಲ್ಲಾ" ಎಂಬ ಸುಂದರ ನುಡಿಗಳನ್ನು ಉಲ್ಲೇಖಿಸಿದ ಅವರು, ವಿದ್ಯಾರ್ಥಿಗಳು ಸಮಾಜಕ್ಕೆ ಬೆಳಕಾಗಬೇಕೇ ಹೊರತು ಬೆಂಕಿಯಾಗುವ ಕೆಲಸ ಮಾಡಬಾರದು. ಸಮಾಜದಲ್ಲಿ ನಿಮ್ಮ ಆಚಾರ-ವಿಚಾರಗಳು, ಮಾತು ಹಾಗೂ ನಡವಳಿಕೆ ಅತ್ಯಂತ ಉದಾತ್ತವಾಗಿರಬೇಕು ಎಂದು ಕಿವಿಮಾತು ಹೇಳಿದರು.

ಛಲ ಬಿಡದ ಸಾಧನೆಯ ಹಾದಿ

ಬದುಕಿನಲ್ಲಿ ಯಾವುದೇ ಸವಾಲುಗಳು ಎದುರಾದರೂ ಅದಕ್ಕಂಜದೆ, "ನನ್ನಿಂದ ಇದು ಸಾಧ್ಯವಿಲ್ಲ, ನನಗೆ ಇದು ಬರುವುದಿಲ್ಲ" ಎಂಬ ಕೀಳರಿಮೆಯನ್ನು ತೊಡೆದುಹಾಕಬೇಕು. ಸಾಧನೆಗೆ ಅಸಾಧ್ಯವಾದದ್ದು ಯಾವುದು ಇಲ್ಲ. ನಿರಂತರ ಶ್ರಮ ಮತ್ತು ಪರಿಶ್ರಮವೊಂದೇ ನಮ್ಮನ್ನು ಯಶಸ್ಸಿನ ಕಡೆಗೆ ಕೊಂಡೊಯ್ಯಬಲ್ಲದು ಎಂದು ವಿದ್ಯಾರ್ಥಿಗಳಲ್ಲಿ ಆತ್ಮಸ್ಥೈರ್ಯ ತುಂಬಿದರು.

ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ವೀರಣ್ಣ ಎಸ್.ಸಿ. ಅಧ್ಯಕ್ಷತೆ ವಹಿಸಿದ್ದರು. ತುಮಕೂರು ವಿಶ್ವವಿದ್ಯಾನಿಲಯದ ರಾಷ್ಟ್ರೀಯ ಸೇವಾ ಯೋಜನೆ ಕೋಶದ ಸಂಯೋಜನಾಧಿಕಾರಿ ಪ್ರೊ.ನಾಗಾಭೂಷಣ ಬಗ್ಗನಾಡು, ತುಮಕೂರು ಶ್ರೀಸಿದ್ಧಗಂಗಾ ಕಲಾ ಮತ್ತು ವಾಣಿಜ್ಯ ಸಂಜೆ ಕಾಲೇಜಿನ ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಬಸವರಾಜು. ಪಿ., ಐಕ್ಯೂಎಸಿ ಸಂಚಾಲಕರಾದ ಡಾ.ಸರಸ್ವತಿ ಕೆ.ಬಿ., ಸಾಂಸ್ಕೃತಿಕ ವೇದಿಕೆ ಸಂಚಾಲಕರಾದ ಪ್ರೊ.ಜಗದೀಶ್ ಜಿ.ಬಿ. ಉಪಸ್ಥಿತರಿದ್ದರು.

# ದೇಶದ ಅಭಿವೃದ್ಧಿಗೆ ಲಿಂಗ ಮತ್ತು ಜಾತಿ ತಾರತಮ್ಯ ಮುಕ್ತ ಸಮಾಜ ಅನಿವಾರ್ಯ



ಹುಳಿಯಾರು: ಹುಳಿಯಾರಿನ ಬಿ.ಎಂ.ಎಸ್. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 2026-27ನೇ ಸಾಲಿನ ಕ್ರೀಡಾ, ಸಾಂಸ್ಕೃತಿಕ, ರೆಡ್‌ಕ್ರಾಸ್, ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್), ರೋವರ್ಸ್ ಅಂಡ್ ರೇಂಜರ್ಸ್ ಹಾಗೂ ವಿವಿಧ ಚಟುವಟಿಕೆಗಳ ಉದ್ಘಾಟನಾ ಸಮಾರಂಭವು ಅತ್ಯಂತ ಸಂಭ್ರಮದಿಂದ ನೆರವೇರಿತು.

ಕಾರ್ಯಕ್ರಮದಲ್ಲಿ ತುಮಕೂರು ವಿಶ್ವವಿದ್ಯಾನಿಲಯದ ರಾಷ್ಟ್ರೀಯ ಸೇವಾ ಯೋಜನೆ ಕೋಶದ ಸಂಯೋಜನಾಧಿಕಾರಿ ಪ್ರೊ.ನಾಗಾಭೂಷಣ ಬಗ್ಗನಾಡು ಅವರು, ದೇಶದ ಸರ್ವಾಂಗೀಣ ಅಭಿವೃದ್ಧಿಗೆ ಸಮಾಜದಲ್ಲಿ ಬೇರೂರಿರುವ ಲಿಂಗ ತಾರತಮ್ಯ ಹಾಗೂ ಜಾತಿ ತಾರತಮ್ಯ ಸಂಪೂರ್ಣವಾಗಿ ತೊಲಗಬೇಕು ಎಂದು ಬಲವಾಗಿ ಪ್ರತಿಪಾದಿಸಿದರು.

ದೇಶದ ಅಭಿವೃದ್ಧಿಗೆ ತಾರತಮ್ಯ ನಿವಾರಣೆಯ ಅಗತ್ಯತೆ " ಜಗತ್ತಿನಲ್ಲಿ ಮುಂದುವರಿದ ರಾಷ್ಟ್ರಗಳು, ಮುನ್ನಡೆಯುತ್ತಿರುವ ರಾಷ್ಟ್ರಗಳು ಮತ್ತು ಹಿಂದುಳಿದ ರಾಷ್ಟ್ರಗಳು ಎಂದು ವಿಂಗಡಿಸಲಾಗಿದೆ ಎಂದರು. ನಮ್ಮ ದೇಶವು ಮುನ್ನಡೆಯುತ್ತಿರುವ ರಾಷ್ಟ್ರಗಳ ಸಾಲಿನಲ್ಲಿದ್ದರೂ, ದೇಶದ ಅಭಿವೃದ್ಧಿಗೆ ಪ್ರಮುಖ ತಡೆಯಾಗಿ ನಿಂತಿರುವುದು ವ್ಯವಸ್ಥೆಯಲ್ಲಿರುವ ಅಸಮಾನತೆಗಳು. "ದೇಶವು ನಿಜವಾದರ್ಥದಲ್ಲಿ ಅಭಿವೃದ್ಧಿ ಹೊಂದಬೇಕಾದರೆ ಮತ್ತು ಮುಂದುವರಿದ ರಾಷ್ಟ್ರಗಳ ಸಾಲಿಗೆಸೇರಬೇಕಾದರೆ, ನಮ್ಮ ನಡುವೆ ಇರುವ ಲಿಂಗ ತಾರತಮ್ಯ, ಜಾತಿ ತಾರತಮ್ಯ, ವರ್ಗ ಹಾಗೂ ವರ್ಣ ಭೇದಗಳು ಸಂಪೂರ್ಣವಾಗಿ ನಿರ್ಮೂಲನೆಯಾಗಬೇಕು. ಹೆಣ್ಣು ಮತ್ತು ಗಂಡು ಎಂಬ ತಾರತಮ್ಯ ಅಥವಾ ಮೇಲು-ಕೀಳು ಎಂಬ ಜಾತಿ ತಾರತಮ್ಯ ಇರುವವರೆಗೆ ಯಾವುದೇ ಕುಟುಂಬವಾಗಲಿ ಅಥವಾ ದೇಶವಾಗಲಿ ನಿಜವಾದ ಪ್ರಗತಿ ಸಾಧಿಸಲು ಸಾಧ್ಯವಿಲ್ಲ" ಎಂದು ಅವರು ಎಚ್ಚರಿಸಿದರು.

ಶಿಕ್ಷಣ ಮತ್ತು ಲಿಂಗ-ಜಾತಿ ತಾರತಮ್ಯದ ಬೇರುಗಳು : ದೇಶದಲ್ಲಿ ಇಂದಿಗೂ ಲಿಂಗ ಮತ್ತು ಜಾತಿ ತಾರತಮ್ಯಗಳು ಪರಂಪರೆ ಹಾಗೂ ಸಂಪ್ರದಾಯದ ಹೆಸರಿನಲ್ಲಿ ಜೀವಂತವಾಗಿರುವುದಕ್ಕೆ ಕಳವಳ ವ್ಯಕ್ತಪಡಿಸಿದ ಪ್ರೊ. ನಾಗಾಭೂಷಣ ಅವರು, ಇತಿಹಾಸದ ಕಾಲಘಟ್ಟದಿಂದಲೂ ಹೆಣ್ಣುಮಕ್ಕಳನ್ನು ಹಾಗೂ ನಿರ್ದಿಷ್ಟ ಸಮುದಾಯಗಳನ್ನು ಶಿಕ್ಷಣದಿಂದ ವಂಚಿತಗೊಳಿಸುವ ಪ್ರಯತ್ನಗಳು ನಡೆದಿವೆ ಎಂದರು. ಬುದ್ಧನಿಂದ ಹಿಡಿದು ಕುವೆಂಪು ಅವರವರೆಗೆ ಅನೇಕ ದಾರ್ಶನಿಕರು ಸಮಾಜದೊಳಗಿನ ಈ ಭೇದಭಾವಗಳನ್ನು ಕಳಿಯಲು ಹೋರಾಟ ನಡೆಸಿದ್ದರೂ, ಅವು ಇಂದಿಗೂ ಜೀವಂತವಾಗಿರುವುದು ದುರದೃಷ್ಟಕರ. ವಿದ್ಯಾರ್ಥಿಗಳು ತಮ್ಮ ಕಲಿವಿನ ಅಕ್ಷರಗಳ ಮೂಲಕ ಇಂತಹ ತಾರತಮ್ಯದ ಪರಂಪರೆಗಳನ್ನು ಹೊಡೆದೊಡಿಸಿ, ವೈಜ್ಞಾನಿಕ ಮತ್ತು ಸಮಾನತೆಯ ಚಿಂತನೆಯೊಂದಿಗೆ ಹೊಸ ಸಮಾಜವನ್ನು ಕಟ್ಟಬೇಕು ಎಂದು ಕರೆ ನೀಡಿದರು. ಕೇವಲ ಪದವಿ ಪಡೆಯುವುದಷ್ಟೇ ಅಲ್ಲದೆ, ಅಂತರಾಳದಲ್ಲಿರುವ ತಾರತಮ್ಯದ ಮನಸ್ಥಿತಿಯನ್ನು ವಿದ್ಯಾರ್ಥಿಗಳು ತೊಡೆದುಹಾಕಬೇಕು. ಕಠಿಣ ಪರಿಶ್ರಮ, ಶಿಸ್ತು ಮತ್ತು ಸಮಾನತೆಯ ಸಂವಿಧಾನಾತ್ಮಕ ಮೌಲ್ಯಗಳೇ ಯಶಸ್ಸಿಗೆ ನಿಜವಾದ ಮಂತ್ರ. ನಮ್ಮ ಹಣೆಬರಹ ಸರಿ ಇಲ್ಲ ಎಂದು ಕೊರಗುವುದರಲ್ಲಿ ಅರ್ಥವಿಲ್ಲ. ದೃಢಸಂಕಲ್ಪ ಮತ್ತು ಕಠಿಣ ಪರಿಶ್ರಮದಿಂದ ನಮ್ಮ ಭವಿಷ್ಯವನ್ನು ನಾವೇ ರೂಪಿಸಿಕೊಳ್ಳಬಹುದು ಎಂದು ಕಿವಿಮಾತು ಹೇಳಿದರು.

# ಆಗ್ನೇಯ ಪದವೀಧರ ಕ್ಷೇತ್ರದ ಎನ್ಡಿಎ ಅಭ್ಯರ್ಥಿ ಕೆ.ಎಂ. ಸುರೇಶ್ ಗೆಲುವಿಗೆ ಕೋರಿ ಶಿರಾ ತಾಲೂಕಿನಲ್ಲಿ ಭರ್ಜರಿ ಸಿದ್ಧತೆ

ಶಿರಾ:ಆಗ್ನೇಯ ಪದವೀಧರ ಕ್ಷೇತ್ರದ ಜೆಡಿಎಸ್-ಬಿಜೆಪಿ ಮೈತ್ರಿಕೂಟದ (ಎನ್ಡಿಎ) ಅಧಿಕೃತ ಅಭ್ಯರ್ಥಿಯಾಗಿ ಕಣಕ್ಕಿಳಿದಿರುವ ಕೆ.ಎಂ. ಸುರೇಶ್ ಅವರ ಪರವಾಗಿ ಶಿರಾ ತಾಲೂಕಿನಲ್ಲಿ ಚುನಾವಣಾ ಪ್ರಚಾರ ತೀವ್ರಗೊಂಡಿದ್ದು, ಅಕ್ಟೋಬರ್ 23ರಂದು ನಡೆಯಲಿರುವ ಮತದಾನಕ್ಕೆ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ವಿಧಾನ ಪರಿಷತ್ ಶಾಸಕ ಬಿಜೆಪಿ ಮಧುಗಿರಿ ಜಿಲ್ಲಾ ಸಂಘಟನಾತ್ಮಕ ಅಧ್ಯಕ್ಷ ಚಿದಾನಂದ್ ಎಂ. ಗೌಡ ತಿಳಿಸಿರು.

ನಗರದ ಸೇವಾ ಸಧನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು. ಐದು ಜಿಲ್ಲೆಗಳ (ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ, ದಾವಣಗೆರೆ) 36 ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿರುವ ಈ ಬೃಹತ್ ಆಗ್ನೇಯ ಪದವೀಧರ ಕ್ಷೇತ್ರದಲ್ಲಿ ಈ ಬಾರಿ ಸುಮಾರು 1.90 ಲಕ್ಷಕ್ಕೂ ಅಧಿಕ ಮತದಾರರು ಸ್ವಯಂಪ್ರೇರಿತರಾಗಿ ಹೆಸರು ನೋಂದಾಯಿಸಿಕೊಂಡಿದ್ದಾರೆ ಎಂದು ಮಾಹಿತಿ ನೀಡಿದರು. ಕಳೆದ ಚುನಾವಣೆಗೆ ಹೋಲಿಸಿದರೆ ಈ ಬಾರಿ ಮತದಾರರ ಸಂಖ್ಯೆ ಸುಮಾರು ದುಪ್ಪಟ್ಟಾಗಿದೆ ಎಂದರು.

ದಾವಣಗೆರೆಯವರಾದ ಅಭ್ಯರ್ಥಿ ಕೆ.ಎಂ. ಸುರೇಶ್ ಅವರು ಸ್ವಂತ ಶಿಕ್ಷಣ ಸಂಸ್ಥೆ ಹಾಗೂ ಆಸ್ಪತ್ರೆ ನಡೆಸುತ್ತಿದ್ದು, ಸಾವಿರಾರು ಬಡ ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣ ಹಾಗೂ ಉಚಿತ ಆರೋಗ್ಯ ಶಿಬಿರಗಳ ಮೂಲಕ ಸಮಾಜಮುಖಿ ಸೇವೆ ಸಲ್ಲಿಸುತ್ತಿದ್ದಾರೆ.



ಮತದಾನದ ಕೇಂದ್ರಗಳು (ಬೂತ್ ವಿವರ):

ಬರುವ ಅಕ್ಟೋಬರ್ 23ರ ಶುಕ್ರವಾರ ಬೆಳಿಗ್ಗೆ 8:00 ಗಂಟೆಯಿಂದ ಮತದಾನ ಪ್ರಕ್ರಿಯೆ ಆರಂಭವಾಗಲಿದ್ದು, ಶಿರಾ ತಾಲೂಕಿನಲ್ಲಿ ಒಟ್ಟು 5 ಬೂತ್‌ಗಳನ್ನು ಸ್ಥಾಪಿಸಲಾಗಿದೆ:

ಬರಗೂರು: ಹುಣಿಕುಂಟೆ ಹೋಬಳಿ ಬೂತ್

ಗೌಡಗೆರೆ : ಗೌಡಗೆರೆ ಹೋಬಳಿ ಬೂತ್

ಕಳ್ಳಂಬೆಳ್ಳ: ಕಳ್ಳಂಬೆಳ್ಳ ಹೋಬಳಿ ಬೂತ್

ಶಿರಾ ನಗರ / ಕಸಬಾ: ತಾಲೂಕು ಕಚೇರಿಯಲ್ಲಿ 2 ಬೂತ್‌ಗಳು

ಪ್ರತಿ ತಾಲೂಕಿನಲ್ಲಿ ಕೌಶಲ್ಯ ಅಭಿವೃದ್ಧಿ ಕೇಂದ್ರಗಳು ಹಾಗೂ ಡಿಜಿಟಲ್ ಲೈಬ್ರರಿಗಳನ್ನು ಸ್ಥಾಪಿಸುವುದು ಇವರ ಪ್ರಮುಖ ಸಂಕಲ್ಪವಾಗಿದೆ. ಬಿಜೆಪಿ-ಜೆಡಿಎಸ್ ಮೈತ್ರಿಕೂಟದ ಹಿರಿಯ ನಾಯಕರು ಹಾಗೂ ಕಾರ್ಯಕರ್ತರ ಒಮ್ಮತದೊಂದಿಗೆ ಈ ಚುನಾವಣೆ ನಡೆಯುತ್ತಿರುವುದು ಅಭ್ಯರ್ಥಿಯ ಗೆಲುವಿಗೆ ಶ್ರೀರಕ್ಷೆಯಾಗಲಿದೆ, ಕಳೆದ 10 ಬಾರಿ ನಡೆದ ವಿಧಾನ ಪರಿಷತ್ ಚುನಾವಣೆಗಳಲ್ಲಿ ಇಲ್ಲಿಯವರೆಗೂ 7 ರಿಂದ 8 ಭಾರಿ ಬಿಜೆಪಿ ಪಕ್ಷದ ಅಭ್ಯರ್ಥಿಗಳು ಜಯಭೇರಿ ಬಾರಿಸಿರುವುದು ಹೆಮ್ಮೆಯ ವಿಷಯ ಈ ಬಾರಿಯೂ ಸಹ ಎನ್. ಡಿ. ಎ. ಪಕ್ಷದ ಅಭ್ಯರ್ಥಿ ಜಯಶೀಲರಾಗಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಮುಂಬರುವ ಸ್ಥಳೀಯ ಚುನಾವಣೆಗಳಲ್ಲಿಯು ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ಮೈತ್ರಿ ಮುಂದುವರೆಯುವ ಸಾಧ್ಯತೆ ಇದೆ ಎಂದರು. ಶಿರಾ ತಾಲೂಕಿನಲ್ಲಿ ಅಂದಾಜು 6,000 ಮತದಾರರಿದ್ದು, ಸರ್ಕಾರಿ ಹಾಗೂ ಖಾಸಗಿ ನೌಕರರು ಹಾಗೂ ಶಿಕ್ಷಕರು ಮತ ಚಲಾಯಿಸಲು ಅನುಕೂಲವಾಗುವಂತೆ ಆಯಾ ಸಂಸ್ಥೆಗಳ ಮುಖ್ಯಸ್ಥರು ಹಾಗೂ ನಿರ್ವಹಣಾ ಮಂಡಳಿಗೆ ಮನವಿ ಮಾಡಲಾಗಿದೆ. ಪದವೀಧರರು ಹೆಚ್ಚಿನ ಸಂಖ್ಯೆಯಲ್ಲಿ ಬಂದು ತಮ್ಮ ಹಕ್ಕನ್ನು ಚಲಾಯಿಸುವ ಮೂಲಕ ಎನ್ಡಿಎ ಮೈತ್ರಿಕೂಟದ ಅಭ್ಯರ್ಥಿ ಕೆ.ಎಂ. ಸುರೇಶ್ ಅವರನ್ನು ಗೆಲ್ಲಿಸಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬಿಜೆಪಿ ಪಕ್ಷದ ನಗರ, ಗ್ರಾಮಾಂತರ ಮಂಡಲದ ಹಾಗೂ ವಿವಿಧ ಮೋರ್ಚಾಗಳ ಅಧ್ಯಕ್ಷರು, ಉಪಾಧ್ಯಕ್ಷರು, ಪದಾಧಿಕಾರಿಗಳು, ಕಾರ್ಯಕರ್ತರು ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

## ನಾಳೆ ಬೃಹತ್ ಪ್ರಚಾರ ಸಭೆ

ಚುನಾವಣಾ ಪ್ರಚಾರದ ಅಂಗವಾಗಿ ನಾಳೆ (ಅಕ್ಟೋಬರ್ 17) ಮಧ್ಯಾಹ್ನ ಸರಿಯಾಗಿ 2:00 ಗಂಟೆಗೆ ಶಿರಾ ನಗರದ ಸಿರಿಗಂಧ ಪ್ಯಾಲೇಸ್ ಅಥವಾ ಪಾಕಶಾಲಾ ಹೋಟೆಲ್ ಹತ್ತಿರ ಬೃಹತ್ ಮತಯಾಚನಾ ಸಭೆ ನಡೆಯಲಿದೆ. ಜೆಡಿಎಸ್ ಮತ್ತು ಬಿಜೆಪಿ ಪಕ್ಷಗಳ ರಾಜ್ಯ ಹಾಗೂ ಸ್ಥಳೀಯ ಮುಖಂಡರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, ಎಲ್ಲಾ ಪಕ್ಷದ ಕಾರ್ಯಕರ್ತರು ಹಾಗೂ ಪದವೀಧರ ಮತದಾರ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಲಾಗಿದೆ.

## ಮಕ್ಕಳಿಗೆ ವಿವಿಧ ಸ್ಪರ್ಧೆಗಳ ಆಯೋಜನೆ

ರಾಮನಗರ, ಅ.16 (ಕರ್ನಾಟಕ ವಾರ್ತೆ): ಬೆಂಗಳೂರು ದಕ್ಷಿಣ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಬಾಲಭವನ ಸೋಸೈಟಿ ವತಿಯಿಂದ 2026-27ನೇ ಸಾಲಿನಲ್ಲಿ ಜಿಲ್ಲಾ ಮಟ್ಟದ ಮಕ್ಕಳ ದಿನಾಚರಣೆಯ ಅಂಗವಾಗಿ 09 ರಿಂದ 16 ವರ್ಷದೊಳಗಿನ ಮಕ್ಕಳಿಗೆ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

ಸೃಜನಾತ್ಮಕ ಕಲೆ: ಚಿತ್ರಕಲೆ, ಕರಕುಶಲೆ, ಜೇಡಿ ಮಣ್ಣಿನ ಕಲೆ (ಮೂರರಲ್ಲೂ ಕಡ್ಡಾಯವಾಗಿ ಭಾಗವಹಿಸಬೇಕು.)

ಸೃಜನಾತ್ಮಕ ಬರವಣಿಗೆ: ಕಥೆ, ಕವನ, ಪ್ರಬಂಧ ಬರೆಯುವುದು (ಮೂರರಲ್ಲೂ ಕಡ್ಡಾಯವಾಗಿ ಭಾಗವಹಿಸಬೇಕು)

ಸೃಜನಾತ್ಮಕ ಪ್ರದರ್ಶನ ಕಲೆ: ಶಾಸ್ತ್ರೀಯ ನೃತ್ಯ, ಜಾನಪದ ನೃತ್ಯ ಕರ್ನಾಟಕ ಹಾಗೂ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ವಾದ್ಯ ಸಂಗೀತ, ಸುಗಮ ಸಂಗೀತ, ಏಕ ಪಾತ್ರಾಭಿನಯ, ಯೋಗ ನೃತ್ಯ ಯಾವುದಾದರೊಂದು ಕಲೆಯನ್ನು ಮಾತ್ರ ಪ್ರದರ್ಶಿಸಲು ಅವಕಾಶವಿರುತ್ತದೆ. (ಗುಂಪು ಪ್ರದರ್ಶನಕ್ಕೆ ಅವಕಾಶವಿರುವುದಿಲ್ಲ).

ವಿಜ್ಞಾನದಲ್ಲಿ ನೂತನ ಆವಿಷ್ಕಾರ: ವಿಜ್ಞಾನಕ್ಕೆ ಸಂಬಂಧಪಟ್ಟಂತೆ ಒಂದು ವಿಷಯದ ಬಗ್ಗೆ ಮಾದರಿ ಪ್ರದರ್ಶನ ಹಾಗೂ ವಿವರಣೆ ಮತ್ತು ವಿಜ್ಞಾನ ಕ್ಷೇತ್ರಕ್ಕೆ ಸಂಬಂಧಿ ಸಿದಂತೆ ತೀರ್ಪುಗಾರರ ಇನ್ನಿತರೆ ಪ್ರಶ್ನೆಗಳಿಗೆ ಉತ್ತರ (ಮಕ್ಕಳು ಪ್ರತ್ಯೇಕ ಮಾದರಿ ಪ್ರದರ್ಶನ ಮಾಡುವುದು ಕಡ್ಡಾಯ).

ಅಂಗವಿಕಲ/ಬುಡಕಟ್ಟು ಪ್ರದೇಶದ ಮಕ್ಕಳಿಗಾಗಿ: ಮೇಲಿನ ಯಾವುದೇ ಪ್ರಕಾರದಲ್ಲಿ ಭಾಗವಹಿಸದ ಪ್ರತಿಭಾವಂತ ಮಕ್ಕಳಿಗೆ ವಿಶೇಷ ಆದ್ಯತೆ ನೀಡಲಾಗುವುದು.

ಈ ಸ್ಪರ್ಧೆಗಳಲ್ಲಿ ಭಾಗವಹಿಸಲು ಇಚ್ಛಿಸುವ ಮಕ್ಕಳು/ವಿದ್ಯಾರ್ಥಿಗಳು ಅ. 27ರ ಮಂಗಳವಾರ ಸಂಜೆ 5 ಗಂಟೆಯೊಳಗೆ ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಠಡಿ ಸಂಖ್ಯೆ:203, 2ನೇ ಮಹಡಿ. ಜಿಲ್ಲಾ ಪಂಚಾಯತ್ ಭವನ, ಬೆಂಗಳೂರು ದಕ್ಷಿಣ ಜಿಲ್ಲೆ ಈ ವಿಳಾಸಕ್ಕೆ ಅರ್ಜಿ ಸಲ್ಲಿಸಿ, ಭಾಗವಹಿಸಬಹುದಾಗಿರುತ್ತದೆ.

# ಪಿಂಜಾರ/ನದಾಫ್ ಸಮುದಾಯಕ್ಕೆ ಪ್ರವರ್ಗ-1ರ ಜಾತಿ ಪ್ರಮಾಣಪತ್ರ ನೀಡಲು ಆಗ್ರಹಿಸಿ ಜಿಲ್ಲಾಧಿಕಾರಿ ಕಚೇರಿ ಎದುರು ತಮಟೆ ಚಳವಳಿ



ಚಿಕ್ಕಬಳ್ಳಾಪುರ :ಪಿಂಜಾರ/ನದಾಫ್ ಸಮುದಾಯದವರಿಗೆ ಪ್ರವರ್ಗ-1ರ ಅಡಿಯಲ್ಲಿ ಜಾತಿ ಪ್ರಮಾಣಪತ್ರ ನೀಡುವಂತೆ ಒತ್ತಾಯಿಸಿ, ಸಮುದಾಯದ ಮುಖಂಡರು ಹಾಗೂ ಸದಸ್ಯರು ತಮಟೆ ಬಾರಿಸುವ ಮೂಲಕ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ, ಅಪರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಪಿಂಜಾರ/ನದಾಫ್ ಸಮುದಾಯದ ರಾಜ್ಯಾಧ್ಯಕ್ಷರಾದ ಬಶೀರ್ ಅಹ್ಮದ್ ಅವರ ನೇತೃತ್ವದಲ್ಲಿ ನಡೆದ ಈ ಪ್ರತಿಭಟನೆಯಲ್ಲಿ, ಸಮುದಾಯದ ಜನರಿಗೆ ಜಾತಿ ಪ್ರಮಾಣಪತ್ರ ಪಡೆಯುವ ಸಂದರ್ಭದಲ್ಲಿ ಎದುರಾಗುತ್ತಿರುವ ಸಮಸ್ಯೆಗಳನ್ನು ಪರಿಹರಿಸಬೇಕು ಹಾಗೂ ಅರ್ಹ ಫಲಾನುಭವಿಗಳಿಗೆ ಪ್ರವರ್ಗ-1ರ ಅಡಿಯಲ್ಲಿ ಜಾತಿ ಪ್ರಮಾಣಪತ್ರ ವಿತರಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕು ಎಂದು ಒತ್ತಾಯಿಸಲಾಯಿತು.

ಸಮುದಾಯದ ಜನರಿಗೆ ಸರ್ಕಾರದ ಸೌಲಭ್ಯಗಳು, ಶೈಕ್ಷಣಿಕ ಅವಕಾಶಗಳು ಹಾಗೂ ಇತರ ಸಾಂವಿಧಾನಿಕ ಸೌಲಭ್ಯಗಳನ್ನು ಪಡೆಯಲು ಜಾತಿ ಪ್ರಮಾಣಪತ್ರ ಅತ್ಯಂತ ಪ್ರಮುಖ ದಾಖಲೆಯಾಗಿದೆ. ಹೀಗಾಗಿ, ಅರ್ಹ ಸಮುದಾಯದ ಸದಸ್ಯರಿಗೆ ಯಾವುದೇ ಅನಗತ್ಯ ವಿಳಂಬವಿಲ್ಲದೆ ಜಾತಿ ಪ್ರಮಾಣಪತ್ರ ದೊರೆಯುವಂತೆ ಆಡಳಿತ ವ್ಯವಸ್ಥೆ ಕ್ರಮ ಕೈಗೊಳ್ಳಬೇಕು ಎಂಬುದು ಪ್ರತಿಭಟನಾಕಾರರ ಪ್ರಮುಖ ಬೇಡಿಕೆಯಾಗಿತ್ತು.

ಅಧಿಕಾರಿಗಳಿಗೆ ಸೂಚನೆ ನೀಡುವ ಭರವಸೆ

ಪ್ರತಿಭಟನೆಯ ಬಳಿಕ ಸಮುದಾಯದ ಮುಖಂಡರು ಅಪರ ಜಿಲ್ಲಾಧಿಕಾರಿಗಳನ್ನು ಭೇಟಿ ಮಾಡಿ ತಮ್ಮ ಬೇಡಿಕೆಗಳನ್ನು ಒಳಗೊಂಡ ಮನವಿ ಪತ್ರವನ್ನು ಸಲ್ಲಿಸಿದರು. ಮನವಿಗೆ ಸ್ಪಂದಿಸಿದ ಅಪರ ಜಿಲ್ಲಾಧಿಕಾರಿಗಳು, ಈ ಸಮಸ್ಯೆಯ ಕುರಿತು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದು, ಆದಷ್ಟು ಬೇಗ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ತಹಸೀಲ್ದಾರರು ಹಾಗೂ ಕಂದಾಯ ಇಲಾಖೆಯ ರಾಜಸ್ವ ನಿರೀಕ್ಷಕರು (ಖಖ) ಮತ್ತು ಗ್ರಾಮ ಆಡಳಿತ ಅಧಿಕಾರಿಗಳಿಗೆ (ಗಿಂ) ಅಗತ್ಯ ಸೂಚನೆ ನೀಡುವುದಾಗಿ ಭರವಸೆ ನೀಡಿದರು ಎಂದು ಸಂಘದ ಮುಖಂಡರು ತಿಳಿಸಿದರು.

ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ವಾಸಿಸುತ್ತಿರುವ ಪಿಂಜಾರ/ನದಾಫ್ ಸಮುದಾಯದ ಅರ್ಹ ಸದಸ್ಯರಿಗೆ ಜಾತಿ ಪ್ರಮಾಣಪತ್ರ ಪಡೆಯುವ ಪ್ರಕ್ರಿಯೆಯಲ್ಲಿ ಸ್ಪಷ್ಟತೆ ಮತ್ತು ಅನುಕೂಲತೆ ಕಲ್ಪಿಸಬೇಕು. ಅರ್ಜಿದಾರರು ಕಚೇರಿಯಿಂದ ಕಚೇರಿಗೆ ಅಲೆದಾಡುವ ಪರಿಸ್ಥಿತಿ ಉಂಟಾಗದಂತೆ ಅಧಿಕಾರಿಗಳು ಕ್ರಮ ವಹಿಸಬೇಕು ಎಂಬ ಆಶಯವನ್ನು ಮುಖಂಡರು ವ್ಯಕ್ತಪಡಿಸಿದರು.

ಅಲ್ಲದೆ, ಸರ್ಕಾರದ ನಿಯಮಗಳು ಮತ್ತು ಸಂಬಂಧಪಟ್ಟ ದಾಖಲೆಗಳ ಆಧಾರದಲ್ಲಿ ಅರ್ಹ ಅರ್ಜಿಗಳನ್ನು ಪರಿಶೀಲಿಸಿ, ಜಾತಿ ಪ್ರಮಾಣಪತ್ರ ವಿತರಿಸುವ ಕಾರ್ಯವನ್ನು ಸುಗಮಗೊಳಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಯಿತು.

ಸಮುದಾಯದ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಲು ಆಗ್ರಹ

ಈ ಸಂದರ್ಭದಲ್ಲಿ ಮಾತನಾಡಿದ ಪಿಂಜಾರ/ನದಾಫ್ ಸಮುದಾಯದ ರಾಜ್ಯಾಧ್ಯಕ್ಷ ಬಶೀರ್ ಅಹ್ಮದ್ ಅವರು, ಸಮುದಾಯದ ಜನರಿಗೆ ಜಾತಿ ಪ್ರಮಾಣಪತ್ರ ಪಡೆಯುವ ವಿಚಾರದಲ್ಲಿ ಉಂಟಾಗುತ್ತಿರುವ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವ ಅಗತ್ಯವಿದೆ ಎಂದು ಹೇಳಿದರು.

ಜಾತಿ ಪ್ರಮಾಣಪತ್ರವು ಕೇವಲ ಒಂದು ದಾಖಲೆಯಲ್ಲ; ಅರ್ಹ ವ್ಯಕ್ತಿಗಳು ಶಿಕ್ಷಣ, ಉದ್ಯೋಗ ಹಾಗೂ ಸರ್ಕಾರದ ವಿವಿಧ ಸೌಲಭ್ಯಗಳನ್ನು ಪಡೆಯಲು ಅಗತ್ಯವಾಗುವ ಪ್ರಮುಖ ದಾಖಲೆಯಾಗಿದೆ. ಆದ್ದರಿಂದ, ಅರ್ಹ ಸಮುದಾಯದ ಸದಸ್ಯರಿಗೆ ನಿಗದಿತ ನಿಯಮಗಳಂತೆ ಪ್ರಮಾಣಪತ್ರ ದೊರೆಯುವಂತೆ ಸಂಬಂಧಪಟ್ಟ ಅಧಿಕಾರಿಗಳು ಸಹಕಾರ ನೀಡಬೇಕು ಎಂಬುದು ಸಮುದಾಯದ ಬೇಡಿಕೆಯಾಗಿದೆ ಎಂದು ಅವರು ತಿಳಿಸಿದರು.

ಸಮುದಾಯದ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರುವ ಉದ್ದೇಶದಿಂದ ಸಂಘಟನೆ ನಿರಂತರವಾಗಿ ಪ್ರಯತ್ನಿಸುತ್ತಿದೆ. ಆಡಳಿತಾಧಿಕಾರಿಗಳು ಮನವಿಗೆ ಸ್ಪಂದಿಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡುವುದಾಗಿ ಭರವಸೆ ನೀಡಿರುವುದು ಸ್ವಾಗತಾರ್ಹವಾಗಿದೆ. ಈ ಭರವಸೆ ಕಾರ್ಯರೂಪಕ್ಕೆ ಬಂದು, ಸಮುದಾಯದ ಅರ್ಹ ಜನರಿಗೆ ಜಾತಿ ಪ್ರಮಾಣಪತ್ರ ಪಡೆಯಲು ಅನುಕೂಲವಾಗಬೇಕು ಎಂದು ಅವರು ಆಶಿಸಿದರು.

ಸಮುದಾಯದ ಜನರು ತಮ್ಮ ಹಕ್ಕುಗಳು ಮತ್ತು ಸೌಲಭ್ಯಗಳನ್ನು ಪಡೆಯಲು ಅಗತ್ಯವಾದ ದಾಖಲೆಗಳನ್ನು ಹೊಂದುವುದು ಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಕಂದಾಯ ಇಲಾಖೆಯ ಅಧಿಕಾರಿಗಳು ಜನಸ್ನೇಹಿ ರೀತಿಯಲ್ಲಿ ಕಾರ್ಯನಿರ್ವಹಿಸಿ, ಅರ್ಹ ಅರ್ಜಿದಾರರಿಗೆ ಸೂಕ್ತ ಮಾರ್ಗದರ್ಶನ ನೀಡಬೇಕು ಎಂದು ಮನವಿ ಮಾಡಿದರು.

## ಸಂಘಟಿತ ಹೋರಾಟಕ್ಕೆ ಮುಖಂಡರ ಬೆಂಬಲ

ಪಿಂಜಾರ/ನದಾಫ್ ಸಮುದಾಯದ ಸಮಸ್ಯೆಗಳನ್ನು ಪರಿಹರಿಸಲು ಸಂಘಟಿತ ಪ್ರಯತ್ನ ಅಗತ್ಯವಿದೆ ಎಂಬ ಅಭಿಪ್ರಾಯವನ್ನು ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಮುಖಂಡರು ವ್ಯಕ್ತಪಡಿಸಿದರು. ಸಮುದಾಯದ ಜನರಿಗೆ ಎದುರಾಗುವ ಆಡಳಿತಾತ್ಮಕ ತೊಂದರೆಗಳನ್ನು ಸಂಬಂಧಪಟ್ಟ ಇಲಾಖೆಗಳ ಗಮನಕ್ಕೆ ತಂದು, ನ್ಯಾಯಸಮ್ಮತ ಪರಿಹಾರ ದೊರಕಿಸಲು ಸಂಘಟನೆ ಮುಂದುವರಿಯಲಿದೆ ಎಂದು ಮುಖಂಡರು ತಿಳಿಸಿದರು.

ಜಾತಿ ಪ್ರಮಾಣಪತ್ರ ವಿತರಣೆಗೆ ಸಂಬಂಧಿಸಿದಂತೆ ಅಧಿಕಾರಿಗಳಿಗೆ ನೀಡಲಾಗುವ ಸೂಚನೆಗಳು ಪರಿಣಾಮಕಾರಿಯಾಗಿ ಜಾರಿಯಾಗಬೇಕು. ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿಯೂ ಅರ್ಹ ಸಮುದಾಯದ ಜನರಿಗೆ ನಿಯಮಾನುಸಾರ ಪ್ರಮಾಣಪತ್ರ ಪಡೆಯಲು ಅನುಕೂಲವಾಗಬೇಕು. ಈ ಮೂಲಕ ಸಮುದಾಯದ ಜನರು ಶಿಕ್ಷಣ, ಉದ್ಯೋಗ ಹಾಗೂ ಸರ್ಕಾರದ ವಿವಿಧ ಯೋಜನೆಗಳ ಪ್ರಯೋಜನ ಪಡೆಯಲು ಎದುರಾಗುವ ಅಡೆತಡೆಗಳನ್ನು ನಿವಾರಿಸಬೇಕು ಎಂಬುದು ಸಂಘಟನೆಯ ಆಶಯವಾಗಿದೆ.

ತಮಟೆ ಬಾರಿಸುವ ಮೂಲಕ ಗಮನ ಸೆಳೆದ ಪ್ರತಿಭಟನಾಕಾರರು ತಮ್ಮ ಬೇಡಿಕೆಗಳನ್ನು ಆಡಳಿತದ ಮುಂದಿಟ್ಟರು. ಅಪರ ಜಿಲ್ಲಾಧಿಕಾರಿಗಳು ನೀಡಿದ ಭರವಸೆಯ ಹಿನ್ನೆಲೆಯಲ್ಲಿ, ಮುಂದಿನ ದಿನಗಳಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಕೈಗೊಳ್ಳುವ ಕ್ರಮಗಳ ಬಗ್ಗೆ ಸಮುದಾಯದ ಮುಖಂಡರು ನಿರೀಕ್ಷೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸಂಘದ ರಾಜ್ಯಾಧ್ಯಕ್ಷ ಬಶೀರ್ ಅಹ್ಮದ್, ರಾಜ್ಯ ಉಪಾಧ್ಯಕ್ಷ ಶಫಿ ಐ.ಎಂ., ನೂತನ ಉಪಾಧ್ಯಕ್ಷ ಪಾಚಲ್ ಸಾಬ್, ರಾಜ್ಯ ಕಾರ್ಯದರ್ಶಿ ಅಂಶುದ್ದೀನ್ ವೈ.ಕೆ., ರಾಜ್ಯ ಸಹ ಕಾರ್ಯದರ್ಶಿ ಮಹಮ್ಮದ್ ಇಲಿಯಾಜ್, ನಿರ್ದೇಶಕ ರಸೂಲ್ ಸಾಬ್, ಚಿಕ್ಕಬಳ್ಳಾಪುರ ಜಿಲ್ಲಾಧ್ಯಕ್ಷ ಭಕ್ತರ್ ಸಾಬ್, ತುಮಕೂರು ಜಿಲ್ಲಾಧ್ಯಕ್ಷ ಆಜಾಮ್ ಪಾಷ ಸೇರಿದಂತೆ ಸಮುದಾಯದ ಬಂಧುಗಳು ಹಾಗೂ ಸಂಘಟನೆಯ ಮುಖಂಡರು ಉಪಸ್ಥಿತರಿದ್ದರು.

ಪಿಂಜಾರ/ನದಾಫ್ ಸಮುದಾಯದ ಅರ್ಹ ಸದಸ್ಯರಿಗೆ ಪ್ರವರ್ಗ-1ರ ಅಡಿಯಲ್ಲಿ ಜಾತಿ ಪ್ರಮಾಣಪತ್ರ ದೊರೆಯುವಂತೆ ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂಬ ಒತ್ತಾಯದೊಂದಿಗೆ ಪ್ರತಿಭಟನೆ ನಡೆಯಿತು. ಅಪರ ಜಿಲ್ಲಾಧಿಕಾರಿಗಳ ಭರವಸೆಯಂತೆ ಮುಂದಿನ ಕ್ರಮಗಳು ಕೈಗೊಳ್ಳಲ್ಪಟ್ಟು, ಸಮುದಾಯದ ಜನರ ಸಮಸ್ಯೆಗಳಿಗೆ ಪರಿಹಾರ ದೊರೆಯುವುದೇ ಎಂಬುದನ್ನು ಕಾದು ನೋಡಬೇಕಿದೆ.

# ವಿದ್ಯಾರ್ಥಿಗಳು ಮೌಲ್ಯಗಳೊಂದಿಗೆ ಎಂದಿಗೂ ರಾಜೀಯಾಗಬೇಡಿ: ಡಾ||ವಿಷ್ಣು ಭರತ್ ಆಲಂಪಲ್ಲಿ




ಬೆಂಗಳೂರು: ಎಪಿಎಸ್ ಕಾಮರ್ಸ್ ಕಾಲೇಜಿನಲ್ಲಿ ಪ್ರತಿಭಾ ದಿನ ಆಚರಿಸಲಾಯಿತು. ವಿದ್ಯಾರ್ಥಿಗಳು ತಮ್ಮ ಸೃಜನಶೀಲತೆ, ಆತ್ಮವಿಶ್ವಾಸ, ಕಲಾತ್ಮಕ ಸಾಮರ್ಥ್ಯಗಳು ಹಾಗೂ ವೈವಿಧ್ಯಮಯ ಪ್ರತಿಭಾ ಪ್ರದರ್ಶನಕ್ಕೆ ಇದು ವೇದಿಕೆಯಾಗಿತ್ತು., ನಟ ಶ್ರೀನಾಥ್ ವಸಿಷ್ಠ ಹಾಗೂ ಖ್ಯಾತ ಗಾಯಕಿ ಜೋಗಿ ಸುನಿತಾ ಭಾಗಿಯಾಗಿದ್ದು, ಕಾರ್ಯಕ್ರಮಕ್ಕೆ ಮೆರುಗು ಮತ್ತು ಉತ್ಸಾಹ ಹೆಚ್ಚಿಸಿತು.

ಎಪಿಎಸ್ ಸಮೂಹ ಸಂಸ್ಥೆಗಳ ಅಧ್ಯಕ್ಷ ಸಿ.ಎ ಡಾ. ವಿಷ್ಣು ಭರತ್ ಆಲಂಪಲ್ಲಿ ಮಾತನಾಡಿ, ಶಿಕ್ಷಣ ಕೇವಲ ಜ್ಞಾನವನ್ನಷ್ಟೇ ಅಲ್ಲದೆ ಪ್ರತಿಭೆ, ಶಿಸ್ತು ಮತ್ತು ವ್ಯಕ್ತಿತ್ವವನ್ನು ಬೆಳೆಸಬೇಕು. ಸಾಧನೆಗೆ ಎಂದೂ ಮಿತಿ ವಿಧಿಸಬಾರದು.

ತಾತ್ಕಾಲಿಕ ಯಶಸ್ಸಿಗಾಗಿ ನಿಮ್ಮ ಮೌಲ್ಯಗಳೊಂದಿಗೆ ಎಂದಿಗೂ ರಾಜಿ ಮಾಡಿಕೊಳ್ಳಬೇಡಿ. ಪ್ರಾಮಾಣಿಕತೆ, ನೈತಿಕತೆ ಮತ್ತು ಉತ್ತಮ ವ್ಯಕ್ತಿತ್ವವೇ ಶಾಶ್ವತ ಸಾಧನೆಯ ಅಡಿಪಾಯಗಳು ಎಂದರು.

ನಟ ಶ್ರೀನಾಥ್ ವಸಿಷ್ಠ ಮಾತನಾಡಿ, ಎಪಿಎಸ್‌ನೊಂದಿಗಿನ ತಮ್ಮ ನಂಟನ್ನು ಹಾಗೂ

ಈ ಸಂಸ್ಥೆಯನ್ನು ನೆನಪಿಸಿಕೊಳ್ಳಲು ಇರುವ ಅನೇಕ ಕಾರಣಗಳನ್ನು ಆತ್ಮೀಯವಾಗಿ ಸ್ಮರಿಸಿದರು. ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಎಪಿಎಸ್ ಸಂಸ್ಥೆಯ ಬದ್ಧತೆಯನ್ನು ಶ್ಲಾಘಿಸಿದರು. ಯುವ ಮನಸ್ಸಿನಲ್ಲಿರುವ ಅಡಗಿದ ಪ್ರತಿಭೆಗಳನ್ನು ಗುರುತಿಸಿ, ಪೋಷಿಸಿ ಹಾಗೂ ಹೊರತರುವ ಮಹತ್ವವನ್ನು ಅವರು ಒತ್ತಿಹೇಳಿದರು.

ಶಿಕ್ಷಣ ಸಂಸ್ಥೆಗಳು ಕೇವಲ ಶೈಕ್ಷಣಿಕ ಚಟುವಟಿಕೆಗಳಿಗೆ ಸೀಮಿತವಾಗದೆ,

ವಿದ್ಯಾರ್ಥಿಗಳು ತಮ್ಮ ಸಾಮರ್ಥ್ಯವನ್ನು ಕಂಡುಕೊಂಡು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಲು ಅವಕಾಶಗಳನ್ನು ಸೃಷ್ಟಿಸಬೇಕು ಎಂದು ಅವರು ಹೇಳಿದರು. ಗಾಯಕಿ ಜೋಗಿ ಸುನಿತಾ ಗಾಯನ ಗಮನ ಸೆಳೆಯಿತು.

ಆಡಳಿತ ಮಂಡಳಿಯ ಅಧ್ಯಕ್ಷರಾದ ಎಚ್.ವಿ. ಗೌತಮ, ಜಂಟಿ ಕಾರ್ಯದರ್ಶಿ ಎ. ರಾಮಪ್ರಸಾದ್ ಹಾಗೂ ಪ್ರಾಂಶುಪಾಲರಾದ ಪರಮೇಶ್ವರ್ ಮತ್ತಿತರರು ಉಪಸ್ಥಿತರಿದ್ದರು.

# ಭೋವಿ ಬ್ರದರ್ಸ್ ತಂಡದಿಂದ ಅದ್ದೂರಿ ಗಣೇಶೋತ್ಸವ



ಕೆ.ಆರ್.ಪುರ:ಬೆಂಗಳೂರು ನಗರದ ಕೆ ಆರ್ ಪುರ ಕ್ಷೇತ್ರದ ರಾಮಮೂರ್ತಿನಗರ ಸಮೀಪದ ಭೋವಿ ಕಾಲೋನಿ ಗ್ರಾಮದಲ್ಲಿ ಟೀಮ್ ಭೋವಿ ಬ್ರದರ್ಸ್ ವತಿಯಿಂದ ಗಣೇಶೋತ್ಸವವನ್ನು ಅದ್ದೂರಿಯಾಗಿ ಆಚರಿಸಲಾಯಿತು,ದಿನಾಂಕ 12/10/2026 ಸೋಮವಾರ ದಂದು ಗಣಪತಿ ಪ್ರತಿಷ್ಠಾಪನೆ ಪೂಜೆ ಮಾಡುವ ಮೂಲಕ ಶುರುವಾದ ಗಣೇಶೋತ್ಸವ,ಮೂರು ದಿನಗಳ ಕಾಲ ನಡೆಯಿತು.

ದಿನಾಂಕ 14/10/2026 ರ ಬುಧವಾರ ಹೂವಿನ ಪಲ್ಲಕ್ಕಿಯಲ್ಲಿ ತಮಟೆ ವಾದ್ಯಗಳೊಂದಿಗೆ ಭೋವಿ ಕಾಲೋನಿ ರಾಜ ಬೀದಿಗಳಲ್ಲಿ,ಅದ್ದೂರಿ ಮೆರವಣಿಗೆ ಮಾಡುವ ಮೂಲಕ ಗಣಪತಿ ವಿಸರ್ಜನೆ ಕಾರ್ಯಕ್ರಮ ನಡೆಯಿತು.ಈ ಗಣೇಶೋತ್ಸವದಲ್ಲಿ ಪ್ರತಿ ನಿತ್ಯವು ಸಾವಿರಾರು ಜನರಿಗೆ ಅನ್ನ ದಾಸೋಹದ ವ್ಯವಸ್ಥೆಯನ್ನು ಮಾಡಲಾಗಿತ್ತು,ಟೀಮ್ ಭೋವಿ ಬ್ರದರ್ಸ್ ಹಮ್ಮಿಕೊಳ್ಳಲಾ ಗಿದ್ದ,ಗಣೇಶೋತ್ಸವ ಅಂಗವಾಗಿ ಸ್ಥಳೀಯ ಶಾಸಕ ಬೈರತಿ ಬಸವರಾಜ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಿ,ತಂಡಕ್ಕೆ ಶುಭ ಹಾರೈಸಿದರು.ಈ ವೇಳೆ ಪ್ರತಿ ವರ್ಷ ಗಣೇಶೋತ್ಸವ ಆಚರಣೆಗೆ ತಮ್ಮಿಂದಾದ ಸಹಾಯ ಹಸ್ತ ಚಾಚುವುದಾಗಿ ತಿಳಿಸಿದರು.

# ಕಬ್ಬಿಗೆ 5,500 ಬೆಂಬಲ ಬೆಲೆ ನಿಗದಿಪಡಿಸಿ ಉತ್ತಂಬಳ್ಳಿಯಲ್ಲಿ ರೈತ ಸಂಘಟನೆಗಳಿಂದ ರಸ್ತೆ ತಡೆದು ಪ್ರತಿಭಟನೆ



ಕೊಳ್ಳೇಗಾಲ:ಆ.16.ತಾಲ್ಲೂಕಿನ ಉತ್ತಂಬಳ್ಳಿ ಗ್ರಾಮದ ರಾಷ್ಟ್ರೀಯ ಹೆದ್ದಾರಿ ವೃತ್ತದಲ್ಲಿ ವಿವಿಧ ರೈತ ಸಂಘಟನೆಯ ರೈತ ಮುಖಂಡರು ರಸ್ತೆ ತಡೆ ನಡೆಸಿ ಕಬ್ಬು ಬೆಳೆಗೆ ಬೆಂಬಲ ಬೆಲೆ ನೀಡುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸಿದರು

ರೈತ ಸಂಘದ ಜಿಲ್ಲಾಧ್ಯಕ್ಷ ಗೌಡೇಗೌಡ ಮಾತನಾಡಿ, ರೈತರು ಬೆಳೆಯುವ ಕಬ್ಬಿಗೆ ಎಂ ಎಸ್ ಪಿ 5.500 ನಿಗದಿ ಮಾಡಿ ರೈತರ ಕೃಷಿ ಉತ್ಪನ್ನಗಳಿಗೆ ಎಂಎಸ್ ಸ್ವಾಮಿನಾಥನ್ ವರದಿ ಜಾರಿ ಮಾಡಬೇಕು ಹಾಗೂ ಕಬ್ಬು ಕಟಾವು ಸಾಗಾಣಿಕೆ ವೆಚ್ಚವನ್ನು ಕಾರ್ಖಾನೆ ಅವರೇ ಭರಿಸಬೇಕು ಉತ್ತರ ದಕ್ಷಿಣ ಎಂಬ ತಾರತಮ್ಮ

ನಿಲ್ಲಬೇಕು ಕಳೆದ ಸಾಲಿನ ಬಾಕಿ 50 ರೂಪಾಯಿಯನ್ನು ಸರ್ಕಾರ ಆದೇಶದ ಹಣವನ್ನು ತಕ್ಷಣ ನೀಡಬೇಕು, ಸಕ್ಕರೆಗೆ ನಿಗದಿ ಮಾಡಿರುವ 31 ರೂಪಾಯಿ ಬೆಲೆಯನ್ನು ಹೆಚ್ಚಳ ಮಾಡಿ ರೈತರಿಗೆ ನ್ಯಾಯ ಕೊಡಿಸಬೇಕು ಎಂದು ಅಗ್ರಹಿಸಿದರು.

ಕೇಂದ್ರ ಸರ್ಕಾರವು 2013ರ ಚುನಾವಣಾ ಸಂದರ್ಭದಲ್ಲಿ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದರೆ ಸ್ವಾಮಿನಾಥನ್ ವರದಿಯನ್ನು ಜಾರಿ ಮಾಡುತ್ತೇವೆ ಎಂದಿದ್ದರು, ಆದರೆ ಈವರೆಗೂ ಕೂಡ ಜಾರಿ ಮಾಡದೇ ರೈತ ವಿರೋಧಿ ಧೋರಣೆ ತೋರುತ್ತಿದ್ದಾರೆ. ಕೇಂದ್ರ ಸರ್ಕಾರವು ಎಂ ಎಸ್ ಸ್ವಾಮಿನಾಥನ್ ವರದಿ ಜಾರಿ ಮಾಡಲು ಒಂದು ಅಫಿಡವಿಟ್ ಸಲ್ಲಿಸಿತ್ತು ಆದರೆ ಸುಪ್ರೀಂ ಕೋರ್ಟ್ ಇದನ್ನು ಜಾರಿ ಮಾಡಲು ಸಾಧ್ಯವೇ ಇಲ್ಲ ಎಂದು ತಿಳಿಸಿದೆ. ರೈತರ ಬೇಡಿಕೆಗಳನ್ನು ಈಡೇರಿಸದಿದ್ದರೆ, ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳ ಜನಪ್ರತಿನಿಧಿಗಳಿಗೆ ದೇಶ ಮತ್ತು ರಾಜ್ಯದ ಜನತೆ ಮುಂದಿನ ದಿನಗಳಲ್ಲಿ ತಕ್ಕ ಪಾಠ ಕಲಿಸಲಿದ್ದಾರೆ ಎಂದರು.

ಈ ಪ್ರತಿಭಟನೆಯಲ್ಲಿ ಜಿಲ್ಲಾ ಗೌರವಧ್ಯಕ್ಷ ಶಿವಮಲ್ಲು, ಜಿಲ್ಲಾ ಉಪಾಧ್ಯಕ್ಷ ರವಿನಾಯ್ಡು, ತಾಲ್ಲೂಕು ಅಧ್ಯಕ್ಷ ನಟೇಶ್, ಉಪಾಧ್ಯಕ್ಷರು ಅಶೋಕ್, ಗೌರವಧ್ಯಕ್ಷ ಮಸಣಶೆಟ್ಟಿ, ನಂಜುಂಡಸ್ವಾಮಿ, ರೈತ ಸಂಘ (ಚಿನ್ನಪ್ಪ ಪೂಜಾರಿ ಬಣ) ಜಿಲ್ಲಾಧ್ಯಕ್ಷರು ಗೌಡಳ್ಳಿ ಸೋಮಣ್ಣ, ಗೌಡಳ್ಳಿ ಈರಣ್ಣ, ನಾಡಗೌಡ ಪುಟ್ಟಸುಬ್ಬಣ್ಣ ಅಗರ, ಹಿತ್ತಲದೊಡ್ಡಿ ನಾಗರಾಜು, ನರಸೀಪುರ ತಾಲ್ಲೂಕು ಅಧ್ಯಕ್ಷರು ಜಯಸ್ವಾಮಿ, ಗೌಡಳ್ಳಿ ನಂದೀಶ್, ಕಬ್ಬು ಬೆಳೆಗಾರರ ಸಂಘದ ಜಿಲ್ಲಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್, ತಾಂಡವಮೂರ್ತಿ ಮೂರ್ತಿ ಹಾಗೂ ಇತರರು ಇದ್ದರು.

# ಮೀಸಲಾತಿ ಮಿತಿ: ಪರಿಶಿಷ್ಟರಿಗೆ ಅನ್ಯಾಯ

**(ಶೇ. 56 ಮೀಸಲಾತಿ ರಕ್ಷಣೆಗೆ ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿಗೆ ಆಗ್ರಹ)**



ದೇವನಹಳ್ಳಿ: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೀಸಲಾತಿಯನ್ನು ಶೇ.50ಕ್ಕೆ ಮಿತಿಗೊಳಿಸಿರುವ ಹೈಕೋರ್ಟ್ ಆದೇಶದಿಂದ ಈ ಸಮುದಾಯಗಳಿಗೆ ಅನ್ಯಾಯವಾಗಲಿದೆ ಎಂದು ಆಲ್ ಇಂಡಿಯಾ ಬಹುಜನ ಸಮಾಜ ಪಾರ್ಟಿಯ ಪ್ರಧಾನ ಕಾರ್ಯದರ್ಶಿ ನಂದಿಗುಂದ ಪಿ.ವೆಂಕಟೇಶ್ ಆತಂಕ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪರಿಶಿಷ್ಟ ಪಂಗಡಗಳ ಮೀಸಲಾತಿಯನ್ನು ಶೇ.3ರಿಂದ ಶೇ. 7ಕ್ಕೆ ಹಾಗೂ ಪರಿಶಿಷ್ಟ ಜಾತಿಗಳ ಮೀಸಲಾತಿಯನ್ನು ಶೇ. 15ರಿಂದ ಶೇ.17ಕ್ಕೆ ಹೆಚ್ಚಿಸುವ ನಿರ್ಧಾರವನ್ನು ಅಂದಿನ ಬಿಜೆಪಿ ಸರ್ಕಾರ ಕೈಗೊಂಡಿತ್ತು. ಇದರಿಂದ ಒಟ್ಟು ಮೀಸಲಾತಿ ಪ್ರಮಾಣ ಶೇ.56ಕ್ಕೆ ಏರಿಕೆಯಾಗಿತ್ತು. ಆದರೆ, ಈ ಹೆಚ್ಚಳಕ್ಕೆ ಕಾನೂನಾತ್ಮಕ ರಕ್ಷಣೆ ಒದಗಿಸಿ ಸಂವಿಧಾನದ ಒಂಬತ್ತನೇ ಅನುಸೂಚಿಗೆ ಸೇರಿಸುವಲ್ಲಿ ಸರಕಾರ ವಿಫಲವಾಗಿದೆ ಎಂದು ಆರೋಪಿಸಿದರು.ಮೀಸಲಾತಿ ಹೆಚ್ಚಳವನ್ನು ನ್ಯಾಯಾಲಯದಲ್ಲಿ ಸಮರ್ಥಿಸುವಲ್ಲಿ ಸಂಬಂಧಪಟ್ಟವರು ನಿರ್ಲಕ್ಷ್ಯ ತೋರಿರುವುದರಿಂದ ಪರಿಶಿಷ್ಟ ಸಮುದಾಯಗಳ ವಿದ್ಯಾರ್ಥಿಗಳು ಮತ್ತು ಉದ್ಯೋಗಾಕಾಂಕ್ಷಿಗಳಿಗೆ ತೊಂದರೆಯಾಗುವ ಆತಂಕವಿದೆ ಎಂದರು. ರಾಜ್ಯ ಸರಕಾರ ಕೂಡಲೇ ಶೇ. 56 ಮೀಸಲಾತಿ ರಕ್ಷಣೆಗೆ ಅಗತ್ಯ ಕಾನೂನು ಕ್ರಮ ಕೈಗೊಂಡು, ಹೈಕೋರ್ಟ್ ಆದೇಶದ ವಿರುದ್ಧ ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಬೇಕು. ಈ ವಿಚಾರವನ್ನು ಒಂಬತ್ತನೇ ಅನುಸೂಚಿಗೆ ಸೇರಿಸಲು ಕೇಂದ್ರ ಸರಕಾರದ ಮೇಲೂ ಒತ್ತಡ ಹೇರಬೇಕು ಎಂದು ಒತ್ತಾಯಿಸಿದರು.

# ಜೇನು ಕೃಷಿ ತರಬೇತಿಗೆ ಅರ್ಜಿ ಆಹ್ವಾನ

ಬೆಂ. ಗ್ರಾ. ಜಿಲ್ಲೆ, (ಕ.ವಾ): ತೋಟಗಾರಿಕೆ ಇಲಾಖೆಯ ವತಿಯಿಂದ 2026-27ನೇ ಸಾಲಿನಲ್ಲಿ ಮೂರು ತಿಂಗಳ ಜೇನು ಕೃಷಿ ತರಬೇತಿ ಆಯೋಜಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತೋಟಗಾರಿಕೆ ಇಲಾಖೆ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಕೊಡಗು ಜಿಲ್ಲೆಯ ಭಾಗಮಂಡಲದ ಜೇನು ಕೃಷಿ ತರಬೇತಿ ಕೇಂದ್ರದಲ್ಲಿ ಮೂರು ತಿಂಗಳ ತರಬೇತಿ ನಡೆಯಲಿದ್ದು, 2026ರ ನವೆಂಬರ್ 4ರಿಂದ 2027ರ ಫೆಬ್ರವರಿ 3ರವರೆಗೆ ತರಬೇತಿ ನೀಡಲಾಗುತ್ತದೆ.

ತರಬೇತಿ ಪುರುಷರಿಗೆ ಮಾತ್ರ ಇದ್ದು, 10 ಅಭ್ಯರ್ಥಿಗಳನ್ನು ಜಿಲ್ಲೆಯಿಂದ ಆಯ್ಕೆ ಮಾಡಲಾಗುತ್ತದೆ. ಆಸಕ್ತರು ಅರ್ಜಿಗಳನ್ನು ತೋಟಗಾರಿಕೆ ಜಂಟಿ ನಿರ್ದೇಶಕರು/ಉಪನಿರ್ದೇಶಕರ ಕಚೇರಿಯಲ್ಲಿ ಅಥವಾ ಇಲಾಖೆ ವೆಬ್ಸೈಟ್ https://horticulturedir.karnataka.gov.in ನಲ್ಲಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಅಕ್ಟೋಬರ್ 30ರೊಳಗೆ ಅರ್ಜಿ ಸಲ್ಲಿಸಬೇಕು.

# ತುಮಕೂರಿನ ಶ್ರೀ ಶಿವಕುಮಾರ ಸ್ವಾಮೀಜಿ ವೃತ್ತದಲ್ಲಿ ಕಾಮಗಾರಿ ಚುರುಕು : ಮಹಾನಗರಪಾಲಿಕೆ

ತುಮಕೂರು:* ತುಮಕೂರು ಮಹಾನಗರ ಪಾಲಿಕೆ ಕಚೇರಿ ಆವರಣದ ಶ್ರೀ ಶಿವಕುಮಾರ ಸ್ವಾಮೀಜಿ ವೃತ್ತದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿ ಚುರುಕುಗೊಂಡಿದ್ದು, ನಿಗದಿತ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳಿಸಲು ಪಾಲಿಕೆ ಕ್ರಮ ಕೈಗೊಂಡಿದೆ ಎಂದು ಮಹಾನಗರ ಪಾಲಿಕೆ ಪ್ರಕಟಣೆಯಲ್ಲಿ ತಿಳಿಸಿದೆ.

ನಗರದ ಪ್ರಮುಖ ವೃತ್ತಗಳಲ್ಲಿ ಒಂದಾಗಿರುವ ಶಿವಕುಮಾರ ಸ್ವಾಮೀಜಿ ವೃತ್ತದ ಸೌಂದರ್ಯೀಕರಣ ಮತ್ತು ಸಂಚಾರ ವ್ಯವಸ್ಥೆ ಸುಧಾರಣೆಗಾಗಿ ಕೈಗೊಂಡಿರುವ ಈ ಕಾಮಗಾರಿಯಿಂದ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ. ಕಾಮಗಾರಿ ನಡೆಯುವ ಸ್ಥಳದಲ್ಲಿ ಸಾರ್ವಜನಿಕರು ಸಹಕರಿಸುವಂತೆ ಪಾಲಿಕೆ ಮನವಿ ಮಾಡಿದೆ.

ಈ ಕಾಮಗಾರಿ ಪೂರ್ಣಗೊಂಡ ನಂತರ ವೃತ್ತವು ನಗರಕ್ಕೆ ಮತ್ತಷ್ಟು ಮೆರಗು ನೀಡಲಿದೆ ಎಂದು ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.



# ಸುಕನ್ಯ ಶೇಖರ್ ಮನೆಯಲ್ಲಿಗೊಂಬೆ ಹಬ್ಬ: ನವರಾತ್ರಿ ವೈಭವ ಗೊಂಬೆ ಪ್ರದರ್ಶನ

ವಿಜಯನಗರದ ಗಂಗಾಧರ ಬಡಾವಣೆ ಸುಕನ್ಯ ಚಂದ್ರಶೇಖರ್ ಮನೆಯಲ್ಲಿ ನವರಾತ್ರಿಯ ವೈಭವದ ಸಾಂಪ್ರದಾಯದಂತೆ ಗೊಂಬೆಗಳನ್ನು ಕೂರಿಸಲಾಗಿದೆ

ಬಟ್ಟೆ, ಹತ್ತಿ, ಕಂಬಿಗಳು, ಫೈಬರ್, ಮಣ್ಣು ಹೀಗೆ ಹಲವು ವಿಧ ವಿಧವಾದ ಕಚ್ಚಾವಸ್ತುಗಳಿಂದ ಮಾಡಿದ ಗೊಂಬೆಗಳನ್ನು ಪ್ರತಿ ವರ್ಷವೂ ನವರಾತ್ರಿ ಹಬ್ಬವನ್ನು ವೈಭವದಿಂದ ಆಚರಿಸುತ್ತಿದಾರೆ.

# ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ಅ.24 ಕೊನೆಯ ದಿನ ಒಂಬತ್ತು ಕ್ಷೇತ್ರಗಳ ಸಾಧಕರಿಂದ ಅರ್ಜಿ ಆಹ್ವಾನ



ಗುಬ್ಬಿ : ತಾಲೂಕು ಪಂಚಾಯತ್ ಇಓ ಕಚೇರಿಯಲ್ಲಿ 2026 ರ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಆಯ್ಕೆ ಸಮಿತಿಯ ಮೊದಲ ಸಭೆಯನ್ನು ಸಮಿತಿಯ ಅಧ್ಯಕ್ಷರಾದ ತಾ.ಪಂ ಇಓ ರಂಗನಾಥ್ ಅವರ ಅಧ್ಯಕ್ಷತೆಯಲ್ಲಿ ಸಮಿತಿಯ ಸಭೆಯನ್ನು ನಡೆಸಲಾಯಿತು.

ತಾಲೂಕು ಆಡಳಿತ ವತಿಯಿಂದ ಕಳೆದ ಮಂಗಳವಾರ ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿಯ ಅಧ್ಯಕ್ಷರು ಹಾಗೂ ತಹಶೀಲ್ದಾರ್ ಆರತಿ ಬಿ ಅವರ ಅಧ್ಯಕ್ಷತೆಯಲ್ಲಿ ನಾಡ ಹಬ್ಬ ಕನ್ನಡ ರಾಜ್ಯೋತ್ಸವ ಆಚರಣೆ ಹಿನ್ನೆಲೆ ಪೂರ್ವಭಾವಿ ನಡೆಸಿ ರಾಜ್ಯೋತ್ಸವ ಪ್ರಶಸ್ತಿ ಆಯ್ಕೆ ಸಮಿತಿಯನ್ನು ರಚಿಸಿ ಸಮಿತಿಯ ಅಧ್ಯಕ್ಷರನ್ನಾಗಿ ತಾ.ಪಂ ಇಓ ರಂಗನಾಥ್ ಅವರನ್ನು ಆಯ್ಕೆ ಮಾಡಿ ಸಮಿತಿಯಲ್ಲಿ ಒಟ್ಟು 09 ಸದಸ್ಯರನ್ನು ಸಮಿತಿ ಸದಸ್ಯರನ್ನಾಗಿ ಪೂರ್ವಭಾವಿ ಸಭೆಯಲ್ಲಿ ನಿರ್ಣಯ ಮಾಡಿ ಒಮ್ಮತದ ತೀರ್ಮಾನ ಮಾಡಲಾಯಿತು.

ಸಭೆಯಲ್ಲಿ ಮೊದಲ ಸಭೆ ಹಿನ್ನೆಲೆಯಲ್ಲಿ ಪ್ರಶಸ್ತಿ ಕುರಿತು ಆಯ್ಕೆ ಮಾಡುವುದು ಹಾಗೂ ರಾಜ್ಯೋತ್ಸವ ಪ್ರಶಸ್ತಿಗೆ ಅರ್ಜಿ ಸಲ್ಲಿಸುವವರು ಅರ್ಜಿ ಸಲ್ಲಿಸುವ ಕುರಿತು ಚರ್ಚೆ ನಡೆಸಿ ಸಮಿತಿಯ ಸದಸ್ಯರ ಸಲಹೆಗಳನ್ನು ಪಡೆದ ಸಮಿತಿಯ ಅಧ್ಯಕ್ಷರು ಈ ಬಾರಿ ವಿಧಾನ ಪರಿಷತ್ ಚುನಾವಣೆಯ ನೀತಿ ಸಂಹಿತೆ ಜಾರಿ ಹಿನ್ನೆಲೆಯಲ್ಲಿ ಅರ್ಜಿಗಳನ್ನು ನೀಡುವ ಬಗೆ ಕುರಿತು ಚರ್ಚೆ ನಡೆಸಲಾಯಿತು. ಪ್ರತಿ ವರ್ಷವೂ ಆಯ್ಕೆ ಸಮಿತಿಯು ಕಚೇರಿಯಲ್ಲಿ ಅರ್ಜಿಗಳನ್ನು ನೀಡಲು ಪತ್ರಿಕಾ ಪ್ರಕಟಣೆ ಹೊರಡಿಸಲಾಗುತ್ತಿದ್ದು, ಆದರೆ ಈ ಬಾರಿ ಅದು ಸಾಧ್ಯವಿಲ್ಲದೆ ಇರುವ ಕಾರಣ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರು ರಾಜ್ಯೋತ್ಸವ ಪ್ರಶಸ್ತಿಗೆ ಅರ್ಜಿ ಸಲ್ಲಿಸಲು ಇದೆ ತಿಂಗಳ 24 ರಂದು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿದ್ದು, ಅರ್ಜಿ ಸಲ್ಲಿಸುವವರು ಅರ್ಜಿಯೊಂದಿಗೆ ತಮ್ಮ ಸಾಧನೆಯ ಮಾಹಿತಿ ಹಾಗೂ ತಮ್ಮ ಆಧಾರ್ ಕಾರ್ಡ್, ಎರಡು ಪಾಸ್ ಪೋರ್ಟ್ ಪೋಟೋ ದೊಂದಿಗೆ ತಾಲೂಕು ಪಂಚಾಯತ್ ನಲ್ಲಿ ವಿಷಯ ನಿರ್ವಾಹಕ ಎಂ. ಬಿ. ಹರೀಶ್ ಅವರ ಬಳಿ ಅರ್ಜಿಯನ್ನು ಪಡೆದು ಅರ್ಜಿ ಸಲ್ಲಿಸಬಹುದಾಗಿದೆ. ವಿವಿಧ ಕ್ಷೇತ್ರಗಳಾದ ಶಿಕ್ಷಣ, ವೈದ್ಯಕೀಯ, ಕೃಷಿ, ಪರಿಸರ, ಕ್ರೀಡೆ, ರಂಗಭೂಮಿ, ಪತ್ರಿಕೋದ್ಯಮ, ಸಾಹಿತ್ಯ, ಜಾನಪದ ಒಟ್ಟು 09 ಕ್ಷೇತ್ರಗಳಿಗೆ ಅರ್ಜಿ ಸಲ್ಲಿಸಲು ಅವಕಾಶವನ್ನು ಕಲ್ಪಿಸಲಾಗಿದೆ. ಅಕ್ಟೋಬರ್ 24 ರ ಸಂಜೆ 05 ಗಂಟೆಯೊಳಗೆ ಅರ್ಜಿ ಪಡೆಯಲಾಗುವುದು ಬಳಿಕ ಬಂದಲ್ಲಿ ಅದನ್ನು ಮಾನ್ಯ ಮಾಡುವಂತಿಲ್ಲ ಎಂದು ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನ ಮಾಡಲಾಗಿದೆ.

ಈ ಸಭೆಯಲ್ಲಿ ಕಸಾಪ ಅಧ್ಯಕ್ಷ ಯತೀಶ್, ತಾಲೂಕು ವೈದ್ಯಾಧಿಕಾರಿ ಡಾ.ಸವಿತಾ, ರಂಗ ಕಲಾವಿದರಾದ ಕರಿಯಪ್ಪ, ನಾಗರಿಕ ಹಿತರಕ್ಷಣಾ ಸಮಿತಿ ಅಧ್ಯಕ್ಷ ಎಚ್ ಡಿ ಯಲ್ಲಪ್ಪ, ಕಾರ್ಯ ನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಸಂಜಯ್ ಕೆ, ಕೃಷಿ ಇಲಾಖೆಯ ದರ್ಶನ್, ವಕೀಲೆ ಮಂಗಳಾ ರವೀಶ್, ನಿರ್ವಾಹಕ ಹರೀಶ್ ಎಂ ಬಿ, ಶಿಕ್ಷಣ ಇಲಾಖೆ, ಪದವಿ ಕಾಲೇಜು ಉಪನ್ಯಾಸಕರು ಸೇರಿದಂತೆ ಇನ್ನಿತರರು ಹಾಜರಿದ್ದರು.

# ಕೆಇಬಿ ಮುಂಭಾಗ ನಂದಿನಿ ಹಾಲಿನ ಮಳಿಗೆ ಉದ್ಘಾಟನೆ ಆರೋಗ್ಯ ರಕ್ಷಣೆಗೆ ನಂದಿನಿ ಹಾಲನ್ನೆ ಬಳಸಿ-ಮಹಾಲಕ್ಷ್ಮಿ



ಕೋಲಾರ:- ನಗರದ ಕೆಇಬಿ ಕಚೇರಿ ಮುಂಭಾಗ ಅನಿತಾ ಸಿ.ನಾರಾಯಣಸ್ವಾಮಿ ಅವರ ಮೂಲಕ ಸ್ಥಾಪಿಸಿರುವ ನೂತನ ನಂದಿನಿ ಹಾಲಿನ ಮಳಿಗೆಗೆ ಕೋಲಾರ ಹಾಲು ಒಕ್ಕೂಟದ ನಿರ್ದೇಶಕಿ ಮಹಾಲಕ್ಷ್ಮೀ ಪ್ರಸಾದ್‌ಬಾಬು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಅವರು ಮಾತನಾಡಿ, ಸಾರ್ವಜನಿಕರು ನಂದಿನಿ ಹಾಲನ್ನೆ ಬಳಸಿ, ಜಿಲ್ಲೆಯ ರೈತರ ಉತ್ತಮ ಬದುಕಿಗೆ ನೆರವಾಗಿ ಎಂದು ಕೋರಿ, ನಂದಿನಿ ಹಾಲು ಇತರೆಲ್ಲಾ ಹಾಲುಗಳಿಗಿಂತ ಉತ್ತಮ ಗುಣಮಟ್ಟ ಹೊಂದಿದೆ ಎಂದರು.

ಕೋಮುಲ್ ಹಾಲಿನ ಗುಣಮಟ್ಟದಲ್ಲಿ ಎಂದಿಗೂ ರಾಜಿ ಮಾಡಿಕೊಳ್ಳುವುದಿಲ್ಲ ಎಂದ ಅವರು, ಜನತೆ ಕಲೆಬೆರಿಕೆ ಹಾಲಿನಿಂದಾಗುವ ಮಾರಕ ಆರೋಗ್ಯ ಸಮಸ್ಯೆಗಳ ಕುರಿತು ಎಚ್ಚರವಹಿಸಿ, ಜನರ ಹಿತ ಕಾಯುವ ನಂದಿನಿ ಹಾಲು ಮತ್ತು ಅದರ ಉತ್ಪನ್ನಗಳನ್ನೇ ಬಳಸಿ ಎಂದು ತಿಳಿಸಿ ಮಳಿಗೆ ಮಾಲೀಕರಿಗೆ ಶುಭ ಕೋರಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಎಸ್ಸಿಘಟಕದ ಜಿಲ್ಲಾಧ್ಯಕ್ಷ ಕೆ.ಜಯದೇವ್, ಮುಖಂಡ ಪ್ರಸಾದ್‌ಬಾಬು, ಪತ್ರಕರ್ತರ ಸಹಕಾರ ಸಂಘದ ಅಧ್ಯಕ್ಷ ಕೆ.ಎಸ್. ಗಣೇಶ್,ಮುನಿವೆಂಕಟಯಾದವ್,ಎಂ.ಹರೀಶ್, ಕೃಷ್ಣ,ರವಿ, ಅನಿತಾ, ಸಿ.ನಾರಾಯಣಸ್ವಾಮಿ, ಕೆ.ಗಣೇಶ್,ಂುುರ್ರಪ್ಪ,ಲಿಂಗೇಶ್, ಪದ್ಮಾವತಿ,ಉಮಾದೇವಿ ಮತ್ತಿತರರಿದ್ದರು.

# ಬಸ್ಸಿನಲ್ಲಿ ಸೀಟು ಸಿಗದ ಕಾರಣಕ್ಕೆ ಪ್ರಯಾಣಿಕರಿಗೆ ಕಿರುಕುಳ
## ಅರ್ಧ ಗಂಟೆ ಪ್ರಯಾಣದುದ್ದಕ್ಕೂ ಗಲಾಟೆ ಮಾಡಿದ ಮಹಿಳೆ




**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಚಿಕ್ಕಬಳ್ಳಾಪುರ:** ರಾಜ್ಯ ಕಾಂಗ್ರೆಸ್ ಸರ್ಕಾರ ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಮಾಡಿತಲ್ಲಾ, ಆಗಲೇ ಆರಂಭವಾಯಿತು ಸಮಸ್ಯೆ. ಈ ಸಮಸ್ಯೆ ಇದೀಗ ಉಲ್ಬಣವಾಗಿ, ಬಸ್ಸಿನಲ್ಲಿ ಪ್ರಯಾಣಿಸುತ್ತಿರುವ ಪ್ರಯಾಣಿಕರೆಲ್ಲ ರೋಸಿಹೋಗಿ ಮಹಿಳೆಯೊಬ್ಬರಿಗೆ ತರಾಟೆಗೆ ತೆಗೆದುಕೊಂಡ ಘಟನೆಯೊಂದು ಇಂದು ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ಸಿನಲ್ಲಿ ನಡೆದಿದೆ.

ಬಸ್ಸಿನಲ್ಲಿರುವ ಪ್ರಯಾಣಿಕರೆಲ್ಲ ಮಹಿಳೆಯೊಬ್ಬರಿಗೆ ತರಾಟೆಗೆ ತೆಕಗೆದುಕೊಳ್ಳಿರುವುದು, ಇದಕ್ಕೆ ಕಾರಣ ಬಸ್ಸಿನಲ್ಲಿರುವ ಪ್ರಯಾಣಿಕರಿಗೆ ಈ ಮಹಿಳೆ ಎಷ್ಟು ಕಿರುಕುಳ ನೀಡಿರಬೇಕು ಎಂಬುದನ್ನು ನೀವೇ ಊಹಿಸಿ. ಈ ಮಹಿಳೆ ಇವರು ಚಿಕ್ಕಬಳ್ಳಾಪುರದಿಂದ ಬೆಂಗಳೂರಿಗೆ ಹೋಗುವ ಬಸ್ಸಿಗೆ ಹತ್ತಿದ್ದಾರೆ. ಆದರೆ ಅಷ್ಟೊತ್ತಿಗಾಗಲೇ ಬಸ್ಸಿನಲ್ಲಿದ್ದ ಎಲ್ಲ ಸೀಟುಗಳೂ ತುಂಬಿವೆ. ಆಗ ಮಹಿಳೆಯರಿಗೆ ಮೀಸಲಾದ ಆಸನಗಳಲ್ಲಿ ಪುರುಷರು ಕೂತಿದ್ದಾರೆ ಅಂತ ಮೊದಲಿಗೆ ಮಹಿಳೆ ಖ್ಯಾತೆ ತೆಗೆದಿದ್ದಾರೆ. ಇದನ್ನು ಗಮನಿಸಿದ ಚಾಲಕ ಕಂ ನಿರ್ವಾಹಕ ಮಹಿಳೆಯರ ಆಸನಗಳಿಂದ ಪುರುಷರನ್ನು ಎಬ್ಬಿಸಿ, ಮಹಿಳೆಯರನ್ನು ಕೂರಿಸಿದ್ದಾರೆ.

ಅಲ್ಲಿಗೇ ಸುಮ್ಮನಾಗದ ಮಹಿಳೆ ಸ್ವಾತಂತ್ರ್ಯ ಹೋರಾಟಗಾರರಿಗೆ ಮೀಸಲಾದ ಆಸನ ತಮಗೆ ಕೊಡಿಸುವಂತೆ ಕೇಳಿದ್ದಾರೆ. ಆದರೆ ನೀವೇನು ಸ್ವಾತಂತ್ರ್ಯ ಹೋರಾಟಗಾರರಾ ಎಂದು ಚಾಲಕ ಕಂ ನಿರ್ವಾಕರು ಪ್ರಶ್ನೆ ಮಾಡಿದರೆ, ಹಿರಿಯ ನಾಗರಿಕರ ಆಸನ ಕೊಡಿಸುವಂತೆ ಮತ್ತೆ ಬೇಡಿಕೆ ಇಟ್ಟಿದ್ದಾರೆ. ಆದರೆ ಅದಕ್ಕೂ ನಿಮಗೆ 60 ವರ್ಷ ತುಂಬಿಲ್ಲ. ಹಾಗಾಗಿ ನಿಮಗೆ ಹಿರಿಯ ನಾಗರಿಕರ ಆಸನ ಕೊಡಿಸಲು ಸಾಧ್ಯವಿಲ್ಲ ಎಂದು ಚಾಲಕರು ನಿರಾಕರಿಸಿದ್ದಾರೆ. ಇದರಿಂದ ಅಸಮಾಧಾನಗೊಂಡ ಮಹಿಳೆ ತಮಗೆ ಕೂರಲು ಯಾವುದೇ ಆಸನ ನೀಡದ ಸಹ ಪ್ರಯಾಣಿಕರು ಮತ್ತು ಚಾಲಕರ ವಿರುದ್ಧ ಗಲಾಟೆಗೆ ನಿಂತಿದ್ದಾರೆ. ಇದರಿಂದ ಬಸ್ಸಿನಲ್ಲಿರುವ ಸಹ ಪ್ರಯಾಣಿಕರು ಮಹಿಳೆಗೆ ಸಮಾಧಾನ ಪಡಿಸಲು ಎಷ್ಟೇ ಪ್ರಯತ್ನಿಸಿದರೂ ಸಿಕ್ಕ ಸಿಕ್ಕವರ ಮೇಲೆಲ್ಲ ಮಹಿಳೆ ತಿರುಗಿ ಬಿದ್ದಿದ್ದಾರೆ.

ಹೀಗೆ ಸಹ ಪ್ರಯಾಣಿಕರ ಮೇಲೆಲ್ಲಾ ಕೂಗಾಡುತ್ತಾ ಚಿಕ್ಕಬಳ್ಳಾಪುರದಿಂದ ದೇವನಹಳ್ಳಿ ದಾಟುವವರೆಗೂ ಮಹಿಳೆ ಕಿರಿಕಿರಿ ಮುಂದುವರಿದಿದೆ. ಇದರಿಂದ ರೋಸಿಹೋದ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ಚಾಲಕ ಬಸ್ ನಿಲ್ಲಿಸಿ ಬಂದು, ಮಹಿಳೆಯನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಇದರಿಂದ ರೋಸಿಹೋಗಿದ್ದ ಸಹ ಪ್ರಯಾಣಿಕರೂ ಆ ಮಹಿಳೆಯ ವಿರುದ್ಧ ತಿರುಗಿ ಬಿದ್ದಿದ್ದಾರೆ. ಇಷ್ಟೆಲ್ಲ ಪ್ರಯಾಣಿಕರು ಬುದ್ಧಿ ಹೇಳಿದರೂ ಮಹಿಳೆ ಮಾತ್ರ ತಮ್ಮ ಹಠ ಬಿಡದೆ ಕಿರಿಕಿರಿ ಮುಂದುವರಿಸಿದ್ದಾರೆ.

ಸಹ ಪ್ರಯಾಣಿಕರು ಈ ಮಹಿಳೆಯ ಕಿರುಕುಳದಿಂದ ರೋಸಿಹೋಗಿ ಎಷ್ಟು ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ ಅಂತ. ರಾಜ್ಯ ಸರ್ಕಾರದ ಶಕ್ತಿ ಯೋಜನೆಯಿಂದ ಈ ಮಹಿಳೆಗೆ ಮಾತ್ರ ಶಕ್ತಿ ಬಂದಂತಿದೆ. ಈ ಮಹಿಳೆಯ ಕಿರುಕುಳ ಸಹ ಪ್ರಯಾಣಿಕರಿಗೆ ಎಷ್ಟು ಕಿರುಕುಳ ನೀಡಿದೆ ಎಂಬುದು ಇವರ ಮಾತುಗಳಲ್ಲಿಯೇ ಅರ್ಥವಾಗಲಿದೆ. ಇನ್ನು ಇವರ ಮನೆಯಲ್ಲಿರುವವರ ಸ್ಥಿತಿ ಏನು ಎಂಬುದನ್ನು ಯೋಚನೆ ಮಾಡಿದರೇನೇ ಭಯ ಆಗುವಂತಿದೆ ಅಲ್ಲವೇ.

# ವಕೀಲರ ಸಂಘದಿಂದ ಆರೋಗ್ಯ ತಪಾಸಣಾ ಶಿಬಿರ



**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಚಿಂತಾಮಣಿ :** ನಗರದ ಜೆ.ಎಂ.ಎಫ್.ಸಿ. ನ್ಯಾಯಾಲಯದ ವಕೀಲರ ಸಂಘದ ಕಾರ್ಯಾಲಯದಲ್ಲಿ ಚಿಂತಾಮಣಿ ತಾಲೂಕು ವಕೀಲರ ಸಂಘ ಹಾಗೂ ಬೆಂಗಳೂರಿನ ಸ್ವಾಸ್ಥ್ಯ ಹೆಲ್ತ್ ಸೆಂಟರ್ ವತಿಯಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿತ್ತು. ಈ ಶಿಬಿರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಕೀಲರು ಹಾಗೂ ಸಾರ್ವಜನಿಕರು ಪಾಲ್ಗೊಂಡು ಶಿಬಿರದ ಸದುಪಯೋಗವನ್ನು ಪಡೆದುಕೊಂಡರು.

ಚಿಂತಾಮಣಿ ನಗರದ ವಕೀಲರ ಸಂಘದ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರಕ್ಕೆ ತಾಲೂಕು ವಕೀಲರ ಸಂಘದ ಅಧ್ಯಕ್ಷ ಮಂಜುನಾಥ ರೆಡ್ಡಿ ಸೇರಿದಂತೆ ಗಣ್ಯರು ಚಾಲನೆ ನೀಡಿದರು. ಶಿಬಿರದಲ್ಲಿ ಬ್ಲಡ್ ಶುಗರ್, ಕ್ಯಾಲ್ಸಿಯಂ, ಒಟ್ಟು ಕೊಲೆಸ್ಟ್ರಾಲ್ ಪರೀಕ್ಷೆ, ಕಣ್ಣಿನ ತಪಾಸಣೆ ಸೇರಿದಂತೆ ವಿವಿಧ ಆರೋಗ್ಯ ತಪಾಸಣೆಗಳನ್ನು ಉಚಿತವಾಗಿ ನಡೆಸಲಾಯಿತು. ಈ ಶಿಬಿರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಕೀಲರು, ಕಕ್ಷಿದಾರರು, ಪೊಲೀಸ್ ಸಿಬ್ಬಂದಿ, ಪತ್ರಕರ್ತರು ಹಾಗೂ ಸಾರ್ವಜನಿಕರು ಭಾಗವಹಿಸಿ ಆರೋಗ್ಯ ತಪಾಸಣೆಯ ಸದುಪಯೋಗ ಪಡೆದುಕೊಂಡರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ವಕೀಲರ ಸಂಘದ ತಾಲೂಕು ಅಧ್ಯಕ್ಷ ಮಂಜುನಾಥ ರೆಡ್ಡಿ ಅವರು, ಆರೋಗ್ಯವೇ ಮಹಾಭಾಗ್ಯ ಎಂಬ ಮಾತನ್ನು ನಮ್ಮ ಹಿರಿಯರು ಅನಾದಿ ಕಾಲದಿಂದಲೂ ಹೇಳುತ್ತಾ ಬಂದಿದ್ದಾರೆ. ಹಿಂದೆ 50 ವರ್ಷ ಮೇಲ್ಪಟ್ಟವರಲ್ಲಿ ವಿವಿಧ ಆರೋಗ್ಯ ಸಮಸ್ಯೆಗಳು ಹೆಚ್ಚಾಗಿ ಕಂಡುಬರುತ್ತಿದ್ದವು. ಆದರೆ ಇತ್ತೀಚಿನ ದಿನಗಳಲ್ಲಿ ಯುವಜನರಲ್ಲಿಯೂ ಅನೇಕ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುತ್ತಿವೆ. ಆದ್ದರಿಂದ ಯುವಕರು ಸೇರಿದಂತೆ ಪ್ರತಿಯೊಬ್ಬರೂ ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ತಿಳಿಸಿದರು.

ಅಲ್ಲದೆ, ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಲು ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುದು, ಆರೋಗ್ಯಕರ ಜೀವನಶೈಲಿಯನ್ನು ರೂಢಿಸಿಕೊಳ್ಳುವುದು ಹಾಗೂ ಆರೋಗ್ಯದ ಬಗ್ಗೆ ಜಾಗೃತಿ ಹೊಂದುವುದು ಅತ್ಯಗತ್ಯ ಎಂದು ಹೇಳಿದರು.

ಈ ಸಂದರ್ಭದಲ್ಲಿ ವಕೀಲರ ಸಂಘದ ಪದಾಧಿಕಾರಿಗಳು, ಹಿರಿಯ ವಕೀಲರು, ಕಕ್ಷಿದಾರರು, ಪೊಲೀಸ್ ಸಿಬ್ಬಂದಿ, ಪತ್ರಕರ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಅ.18, 19ರಂದು ದಸರಾ ಸಂಜೀವಿನಿ ಮಾಸಿಕ ಸಂತೆ
## ಮಹಿಳೆಯರ ಸ್ವಾವಲಂಬನೆಗೆ ಸಂಜೀವಿನಿ ಸಂತೆ ಆಸರೆ



**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಚಿಕ್ಕಬಳ್ಳಾಪುರ:** ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ ಹಾಗೂ ಸಂಜೀವಿನಿ ಡೇ–ಎನ್.ಆರ್.ಎಲ್.ಎಂ. ಜಿಲ್ಲಾ ಅಭಿಯಾನ ನಿರ್ವಹಣಾ ಘಟಕದ ಸಂಯುಕ್ತಾಶ್ರಯದಲ್ಲಿ ವಿಜಯದಶಮಿ ಹಾಗೂ ದಸರಾ ಹಬ್ಬದ ಪ್ರಯುಕ್ತ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಅಕ್ಟೋಬರ್ 18 ಮತ್ತು 19ರಂದು ಎರಡು ದಿನಗಳ ಕಾಲ ದಸರಾ ಸಂಜೀವಿನಿ ಮಾಸಿಕ ಸಂತೆಗಳನ್ನು ಆಯೋಜಿಸಲಾಗಿದೆ.

ಗ್ರಾಮೀಣ ಪ್ರದೇಶಗಳ ಸ್ವಸಹಾಯ ಗುಂಪುಗಳ ಮಹಿಳಾ ಸದಸ್ಯರು ತಯಾರಿಸಿದ ವಿವಿಧ ಹಬ್ಬದ ಉತ್ಪನ್ನಗಳು, ಪೂಜಾ ಸಾಮಗ್ರಿಗಳು, ಕರಕುಶಲ ವಸ್ತುಗಳು, ಆಹಾರ ಉತ್ಪನ್ನಗಳು ಹಾಗೂ ಗೃಹೋಪಯೋಗಿ ವಸ್ತುಗಳ ಪ್ರದರ್ಶನ ಮತ್ತು ನೇರ ಮಾರಾಟಕ್ಕೆ ಸಂತೆಗಳಲ್ಲಿ ಅವಕಾಶ ಕಲ್ಪಿಸಲಾಗಿದೆ. ಸ್ವಸಹಾಯ ಗುಂಪಿನ ಮಹಿಳೆಯರು ತಯಾರಿಸುವ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಒದಗಿಸುವುದು, ಮಹಿಳಾ ಉದ್ಯಮಶೀಲತೆಯನ್ನು ಉತ್ತೇಜಿಸುವುದು, ಉತ್ಪನ್ನಗಳ ಮಾರಾಟವನ್ನು ಹೆಚ್ಚಿಸುವುದು ಹಾಗೂ ಮಹಿಳೆಯರ ಆರ್ಥಿಕ ಸ್ವಾವಲಂಬನೆಯನ್ನು ಬಲಪಡಿಸುವುದು ಈ ಸಂತೆಗಳ ಮುಖ್ಯ ಉದ್ದೇಶವಾಗಿದೆ.

ಜಿಲ್ಲೆಯ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ದಸರಾ ಸಂಜೀವಿನಿ ಮಾಸಿಕ ಸಂತೆಗಳಿಗೆ ಭೇಟಿ ನೀಡಿ, ಸ್ವಸಹಾಯ ಗುಂಪಿನ ಮಹಿಳೆಯರು ತಯಾರಿಸಿದ ಗುಣಮಟ್ಟದ ಉತ್ಪನ್ನ ಖರೀದಿಸುವ ಮೂಲಕ ಅವರ ಪರಿಶ್ರಮಕ್ಕೆ ಪ್ರೋತ್ಸಾಹ ನೀಡಬೇಕು ಹಾಗೂ ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ಕೈಜೋಡಿಸಬೇಕೆಂದು ಜಿ.ಪಂ ಹಾಗೂ ಸಂಜೀವಿನಿ ಡೇ–ಎನ್.ಆರ್.ಎಲ್.ಎಂ. ಜಿಲ್ಲಾ ಅಭಿಯಾನ ನಿರ್ವಹಣಾ ಘಟಕದ ವತಿಯಿಂದ ಮನವಿ ಮಾಡಲಾಗಿದೆ. ಎಂದು ಜಿ.ಪಂ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ಅದ್ದೂರಿ ರಾಜ್ಯೋತ್ಸವ ಆಚರಣೆಗೆ ಸೂಚನೆ
## ಕನ್ನಡ ನಾಡು ನುಡಿ ಸಂಸ್ಕೃತಿ ಅನಾವರಣಕ್ಕೆ ಸಜ್ಜಾದ ತಾಲೂಕು ಆಡಳಿತ



**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಗೌರಿಬಿದನೂರು:** ನಗರದ ತಾಲ್ಲೂಕು ಕಚೇರಿಯಲ್ಲಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದ ಪೂರ್ವಭಾವಿ ಸಭೆ ನಡೆಯಿತು.

ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ತಹಶೀಲ್ದಾರ್ ಕೆ.ಎಂ.ಅರವಿಂದ್, ನವೆಂಬರ್ 1 ರಂದು ನಡೆಯಲಿರುವ 70ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ತಾಲ್ಲೂಕಿನಲ್ಲಿ ಅರ್ಥಪೂರ್ಣವಾಗಿ ಮತ್ತು ಅದ್ದೂರಿಯಾಗಿ ಆಚರಿಸಬೇಕು. ಕನ್ನಡ ನಾಡು, ನುಡಿ, ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ತಿಳಿಸುವ ಕೆಲಸವಾಗಬೇಕು.

ಈ ಬಾರಿಯ ರಾಜ್ಯೋತ್ಸವ ಕಾರ್ಯಕ್ರಮವು ಕೇವಲ ಸರ್ಕಾರಿ ಕಾರ್ಯಕ್ರಮವಾಗದೆ, ಎಲ್ಲಾ ಕನ್ನಡಪರ ಸಂಘಟನೆಗಳು, ಸಾಹಿತಿಗಳು, ಕಲಾವಿದರು ಸೇರಿ ಮಾಡುವ ನಾಡಹಬ್ಬವಾಗಬೇಕು. ಆದ್ದರಿಂದ ಎಲ್ಲಾ ಇಲಾಖೆಯ ಅಧಿಕಾರಿಗಳು ಮತ್ತು ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು ಪರಸ್ಪರ ಸಹಕಾರದಿಂದ ಕೆಲಸ ಮಾಡಬೇಕು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಕನ್ನಡ ಸೇವಕರನ್ನು ಗುರುತಿಸಿ ಸನ್ಮಾನಿಸಬೇಕು. ಅದಕ್ಕಾಗಿ ಸನ್ಮಾನಿತರ ಪಟ್ಟಿಯನ್ನು ಪಾರದರ್ಶಕವಾಗಿ ಮತ್ತು ಅರ್ಹರನ್ನು ಗುರುತಿಸಿ ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಾಜ್ಯೋತ್ಸವದ ದಿನದಂದು ನಡೆಯುವ ಧ್ವಜಾರೋಹಣ, ಮೆರವಣಿಗೆ, ಸಾಂಸ್ಕೃತಿಕ ಕಾರ್ಯಕ್ರಮಗಳ ಬಗ್ಗೆ ಎಲ್ಲರೂ ತಮ್ಮ ಸಲಹೆಗಳನ್ನು ನೀಡಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು ಭಾಗವಹಿಸಿ, ರಾಜ್ಯೋತ್ಸವ ಕಾರ್ಯಕ್ರಮವನ್ನು ಹೇಗೆ ನಡೆಸಬೇಕು, ಸಾಂಸ್ಕೃತಿಕ ಕಾರ್ಯಕ್ರಮಗಳ ಬಗ್ಗೆ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

ಪುನೀತ್ ರಾಜಕುಮಾರ್ ಅವರ ಪುತ್ಥಳಿ ನಿರ್ಮಿಸುವುದಕ್ಕೆ ಸ್ಥಳಾವಕಾಶ ಕಲ್ಪಿಸ ಬೇಕೆಂದು ಮನವಿ ಮಾಡಿದರು.

ನಗರಸಭೆ ಆಯುಕ್ತ ಕೆ.ಜೆ ರಮೇಶ್ ಈ ಬಗ್ಗೆ ಪರಿಶೀಲಿಸಿ ಸ್ಥಳಾವಕಾಶವನ್ನು ಕಲ್ಪಿಸುವುದಾಗಿ ಭರವಸೆ ನೀಡಿದರು.

ವೃತ್ತ ನಿರೀಕ್ಷಕ ವಿ. ಅಂಜನ್ ಕುಮಾರ್, ಕ್ಷೇತ್ರ ಶಿಕ್ಷಣಾಧಿಕಾರಿ ರಮೇಶ್, ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಎನ್.ಆರ್ ಮಂಜುನಾಥ್, ಸೇರಿದಂತೆ ಸಭೆಯಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು, ಎಲ್ಲಾ ಕನ್ನಡಪರ ಸಂಘಟನೆಗಳ ಅಧ್ಯಕ್ಷರು, ಉಪಾಧ್ಯಕ್ಷರು, ಪದಾಧಿಕಾರಿಗಳು ಇದ್ದರು.

# ಸತ್ಯ ಸಾಯಿ ಗ್ರಾಮದಲ್ಲಿ ಅ. 18ರಿಂದ 21ರವರೆಗೆ ಮಹಾರುದ್ರ ಯಾಗ

**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಚಿಕ್ಕಬಳ್ಳಾಪುರ:** ವಿಶ್ವಶಾಂತಿ ಮತ್ತು ಸಮೃದ್ಧಿಯನ್ನು ಸಂಕಲ್ಪವಾಗಿಸಿಕೊಂಡು ಮುದ್ದೇನಹಳ್ಳಿಯ ಸತ್ಯ ಸಾಯಿ ಗ್ರಾಮದಲ್ಲಿ ಅಕ್ಟೋಬರ್ 18ರಿಂದ 21ರವರೆಗೆ ನಾಲ್ಕು ದಿನಗಳ ಮಹಾರುದ್ರ ಯಾಗ ನಡೆಯಲಿದೆ.

ಸತ್ಯ ಸಾಯಿ ಹೃದಯ ಮಂದಿರದ ಆವರಣದಲ್ಲಿರುವ ಯಾಗಶಾಲೆಯಲ್ಲಿ ನಡೆಯಲಿರುವ ಯಾಗವು ಸದ್ಗುರು ಶ್ರೀ ಮಧುಸೂದನ ಸಾಯಿ ಅವರ ಸಾನ್ನಿಧ್ಯದಲ್ಲಿ ಜರುಗಲಿದೆ. ಅಕ್ಟೋಬರ್ 11ರಿಂದ 21ರವರೆಗೆ ನಡೆಯುತ್ತಿರುವ ನವರಾತ್ರಿ ಹೋಮ, ದುರ್ಗಾ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳ ಭಾಗವಾಗಿ ಮಹಾರುದ್ರ ಯಾಗವನ್ನು ಆಯೋಜಿಸಲಾಗಿದೆ. ಶಿವನ ಆರಾಧನೆಗೆ ವಿಶೇಷ ಮಹತ್ವ ಹೊಂದಿರುವ ಈ ಯಾಗದಲ್ಲಿ ರುದ್ರ ಪಾರಾಯಣ, ರುದ್ರಾಭಿಷೇಕ, ರುದ್ರ ಹೋಮ, ಮೃತ್ಯುಂಜಯ ಹೋಮ ಹಾಗೂ ಸಾಯಿ ಗಾಯತ್ರಿ ಹೋಮ ಸೇರಿದಂತೆ ವಿವಿಧ ಧಾರ್ಮಿಕ ವಿಧಿವಿಧಾನಗಳು ನಡೆಯಲಿವೆ.

ಪ್ರತಿದಿನ ಬೆಳಗ್ಗೆ ಧಾರ್ಮಿಕ ವಿಧಿವಿಧಾನ ಅ.18ರಿಂದ 20ರವರೆಗೆ ಪ್ರತಿದಿನ ಬೆಳಿಗ್ಗೆ 6.30ಕ್ಕೆ ಅರುಣ ಪಾರಾಯಣ ದೊಂದಿಗೆ ಕಾರ್ಯಕ್ರಮಗಳು ಆರಂಭವಾಗಲಿವೆ. ಬೆಳಿಗ್ಗೆ 7.15ಕ್ಕೆ ಮಹಾನ್ಯಾಸ ಪಾರಾಯಣ, 7.45ಕ್ಕೆ ಪಂಚಾಮೃತ ಅಭಿಷೇಕ ಹಾಗೂ 8 ಗಂಟೆಗೆ ರುದ್ರ ಪಾರಾಯಣ ಮತ್ತು ರುದ್ರಾಭಿಷೇಕ ನಡೆಯಲಿವೆ. ಬೆಳಿಗ್ಗೆ 10 ಗಂಟೆಗೆ ರುದ್ರ ಹೋಮ, ಮೃತ್ಯುಂಜಯ ಹೋಮ ಮತ್ತು ಸಾಯಿ ಗಾಯತ್ರಿ ಹೋಮ ನೆರವೇರಲಿದ್ದು, 11.30ಕ್ಕೆ ಅಷ್ಟಾವಧಾನ ಸೇವೆ ಹಾಗೂ ಮಹಾಮಂಗಳಾರತಿ ನಡೆಯಲಿದೆ.

ಸಂಜೆ 4 ಗಂಟೆಗೆ ಕ್ರಮಾರ್ಚನೆ ಮತ್ತು ಘನಪಾಠ ನಡೆಯಲಿದ್ದು, ಸಂಜೆ 5 ಗಂಟೆಗೆ ಮಹಾಮಂಗಳಾರತಿ ನೆರವೇರಲಿದೆ. ಅ. 21ರಂದು ಮಹಾಪೂರ್ಣಾಹುತಿ ವಿಜಯದಶಮಿಯ ದಿನವಾದ ಅಕ್ಟೋಬರ್ 21ರಂದು ಬೆಳಿಗ್ಗೆ 5.30ಕ್ಕೆ ಮಂಗಳವಾದ್ಯಗಳೊಂದಿಗೆ ಕಾರ್ಯಕ್ರಮ ಆರಂಭವಾಗಲಿದೆ.

# ಪತ್ರಿಕೆಗಳ ನೋಂದಣಿ ಪ್ರಕ್ರಿಯೆ ಸಂಪೂರ್ಣ ಆನ್ ಲೈನ್
## ಕುಂದುಕೊರತೆ ತ್ವರಿತ ನಿವಾರಣೆಗೆ ಕ್ರಮ: ಯೋಗೇಶ್ ಕುಮಾರ್ ಬವೇಜಾ

**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಬೆಂಗಳೂರು:** ಕರ್ನಾಟಕ ವಾರ್ತೆ: ಪತ್ರಿಕೆಗಳು ಮತ್ತು ನಿಯತಕಾಲಿಕೆಗಳ ನೋಂದಣಿ ಪ್ರಕ್ರಿಯೆಯಲ್ಲಿ ಕೇಂದ್ರ ಸರ್ಕಾರವು ಹಲವಾರು ಮಹತ್ವದ ಬದಲಾವಣೆಗಳನ್ನು ತರುವ ಮೂಲಕ ಸುಮಾರು 150 ವರ್ಷದಷ್ಟು ಹಳೆಯ ಕಾಯ್ದೆಯನ್ನು ಮಾಧ್ಯಮದವರ ಅನುಕೂಲಕ್ಕಾಗಿ ಡಿಜಿಟಲೀಕರಣದೊಂದಿಗೆ ಸರಳೀಕರಣಗೊಳಿಸುವ ಮೂಲಕ ಮಾಧ್ಯಮ ಕ್ಷೇತ್ರವನ್ನು ಪ್ರೋತ್ಸಾಹಿಸಲಾಗುತ್ತಿದೆ ಎಂದು ಭಾರತದ ಪತ್ರಿಕಾ ನೋಂದಣಿಯ ಪ್ರಧಾನ ಮಹಾನಿರ್ದೇಶಕರಾದ ಯೋಗೇಶ್ ಕುಮಾರ್ ಬವೇಜಾ ಅವರು ತಿಳಿಸಿದರು.

ಭಾರತ ಸರ್ಕಾರದ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ವಾರ್ತಾ ಶಾಖೆ ಬೆಂಗಳೂರು ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಹಯೋಗದಲ್ಲಿ ವಾರ್ತಾಸೌಧದ ಮಹಾತ್ಮ ಗಾಂಧೀ ಮಾಧ್ಯಮ ಕೇಂದ್ರದ ಸಭಾಂಗಣದಲ್ಲಿ ಇಂದು ಪತ್ರಿಕಾ ಮತ್ತು ನಿಯತಕಾಲಿಕೆಗಳ ನೋಂದಣಿ ಕಾಯ್ದೆ 2023 ಮತ್ತು ಪ್ರೆಸ್ ಸೇವಾ ಪೋರ್ಟಲ್ ಗೆ ಸಂಬಂಧಿಸಿದ ಕುಂದುಕೊರತೆ, ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಜಿಲ್ಲಾ ಮಟ್ಟದ ದಿನಪತ್ರಿಕೆಗಳ ಮಾಲೀಕರು, ಸಂಪಾದಕರು, ಮುದ್ರಕರು ಹಾಗೂ ಜಿಲ್ಲಾ ವಾರ್ತಾಧಿಕಾರಿಗಳಿಗಾಗಿ ಆಯೋಜಿಸಲಾಗಿದ್ದ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಈ ಹಿಂದೆ ಹೊಸ ಪತ್ರಿಕೆ ಆರಂಭಿಸಬೇಕಾದರೆ ಜಿಲ್ಲಾಧಿಕಾರಿಗಳ ಕಚೇರಿ ಮೂಲಕ ಅರ್ಜಿ ಸಲ್ಲಿಸಿ ದೆಹಲಿಗೆ ಕಳುಹಿಸಬೇಕಾಗಿತ್ತು. ಇದರಿಂದ ತಿಂಗಳುಗಳು ಹಾಗೂ ವರ್ಷಗಳೇ ಕಳೆಯುತ್ತಿದ್ದವು. ಆದರೆ ಈಗ 2023 ರ ಹೊಸ ಕಾಯ್ದೆ ಮೂಲಕ ಎಲ್ಲಾ ಪ್ರಕ್ರಿಯೆಗಳನ್ನು ಪ್ರೆಸ್ ಸೇವಾ ಪೋರ್ಟಲ್ ಮೂಲಕ ಆನ್ಲೈನ್ನಲ್ಲಿ ನಡೆಯಲಿರುವುದರಿಂದ ಭೌತಿಕ ದಾಖಲೆಗಳ ಸಲ್ಲಿಕೆಗೆ ಅವಕಾಶವಿರುವುದಿಲ್ಲ. ಹಾಗಾಗಿ ನೋಂದಣಿ ಪ್ರಕ್ರಿಯೆಯು ಸುಲಭವಾಗಿ ಮತ್ತು ಕಡಿಮೆ ಸಮಯದಲ್ಲಿ ನೆರವೇರಲಿದೆ. ಯಾವುದೇ ದಾಖಲೆಗಳು ಕಳೆದುಹೋಗುವ ಅಥವಾ ಕಾಗದಪತ್ರಗಳ ಅಲೆದಾಟದ ಸಮಸ್ಯೆ ಇರುವುದಿಲ್ಲ. ಆದ್ದರಿಂದ ಪತ್ರಿಕೆಗಳು, ನಿಯತಕಾಲಿಕೆಗಳ ನೋಂದಣಿ ಕಾಯ್ದೆಯ ಮಾರ್ಗಸೂಚಿಯನ್ನು ಎಲ್ಲರೂ ಚಾಚೂ ತಪ್ಪದೆ ಪಾಲಿಸಬೇಕು ಎಂದು ತಿಳಿಸಿದರು.

ನೋಂದಣಿ ಪ್ರಕ್ರಿಯೆಯ ಕಾಲಮಿತಿಯನ್ನು ಗಣನೀಯವಾಗಿ ಕಡಿತಗೊಳಿಸಲಾಗಿದ್ದು, ಅರ್ಜಿ ಸಲ್ಲಿಸಿದ ಕೇವಲ 3 ತಿಂಗಳೊಳಗೆ ಹೊಸ ಪತ್ರಿಕೆಯನ್ನು ಪ್ರಾರಂಭಿಸಬಹುದು ಎಂದು ತಿಳಿಸಿದರು.

ಪಿಆರ್ ಜಿಐನಿಂದ ಸಮಗ್ರ ಪರಿಶೀಲನೆ ಬಳಿಕ ಅಂತಿಮವಾಗಿ ಟೈಟಲ್ ನೀಡಿದ ಮೇಲೆ 12 ತಿಂಗಳೊಳಗೆ ಪತ್ರಿಕೆಯನ್ನು ಆರಂಭಿಸುವುದು ಕಡ್ಡಾಯವಾಗಿರುತ್ತದೆ ಎಂದು ತಿಳಿಸಿದರು.



ಪತ್ರಿಕೆಗಳ ಹೊಸ ರಿಜಿಸ್ಟ್ರೇಶನ್ ಮಾಡುವ ಬಗ್ಗೆ, ಮಾಲೀಕತ್ವ ಬದಲಾವಣೆ, ವಿಳಾಸ ಬದಲಾವಣೆ ಮಾಡಿಸುವುದಕ್ಕೆ ಸಹ ನಿಯಮಾನುಸಾರ ಅವಕಾಶವಿರುತ್ತದೆ. ಹೊಸ ನೋಂದಣಿ ಹೇಗೆ ಮಾಡುವುದು, ಹೊಸ ಆವೃತ್ತಿ ಸೇರ್ಪಡೆ ಹೇಗೆ, ನೋಂದಣಿ ಪರಿಷ್ಕರಣೆ, ಮಾಲೀಕತ್ವ ವರ್ಗಾವಣೆ, ದಂಡ ಪಾವತಿ, ಮುದ್ರಣ ಕಾಗದ ಆಮದು ಮತ್ತು ಪತ್ರಿಕೆಗಳ ಸ್ಥಗಿತಗೊಳಿಸುವಿಕೆ ರದ್ಧತಿ, ಇವೇ ಮುಂತಾದ ಪ್ರಕ್ರಿಯೆಗಳನ್ನು ಡಿಜಿಟಲ್ ಮೂಲಕ ಹೇಗೆ ಮಾಡುವುದು ಎಂಬುದನ್ನು ವಿವರಿಸಿದರು.

ಸಂವಾದದಲ್ಲಿ ಸಂಪಾದಕರುಗಳು ಹಾಗೂ ಜಿಲ್ಲಾ ವಾರ್ತಾಧಿಕಾರಿಗಳ ಪ್ರಶ್ನೆಗಳಿಗೆ ಉತ್ತರಿಸಿದ ಅವರು ಇಲ್ಲಿನ ಪ್ರತಿ ಸಲಹೆಗಳನ್ನು ಸ್ವೀಕರಿಸಲಾಗಿದೆ ಹಾಗೂ ಈ ಕುರಿತಂತೆ ಕೇಂದ್ರದ ವಾರ್ತಾ ಇಲಾಖೆಯ ಗಮನಕ್ಕೆ ತರಲಾಗುವುದು. ಕೇಂದ್ರ ವಾರ್ತಾ ಇಲಾಖೆಯ ಕರ್ನಾಟಕದ ಶಾಖೆಗಳಲ್ಲಿ ಪೇಪರ್ ಗಳ ಹಾಜರಾತಿ ಕುರಿತಂತೆ ಮುದ್ರಿತ ಪೇಪರ್ ಗಳನ್ನು ಪಡೆಯುವ ವ್ಯವಸ್ಥೆ ಜಾರಿಗೆ ತರುವ ಬಗ್ಗೆ ಚಿಂತನೆ ನಡೆಸಲಾಗುವುದು ಎಂದು ಹೇಳಿದರು.

ಇದಕ್ಕೂ ಮುಂಚಿತವಾಗಿ ಮಾತನಾಡಿದ ವಾರ್ತಾ ಇಲಾಖೆಯ ಕಾರ್ಯದರ್ಶಿಗಳಾದ ಜೆ. ಮಂಜುನಾಥ್ ಅವರು ಮಾಧ್ಯಮವು ಪ್ರಜಾಪ್ರಭುತ್ವದ ನಾಲ್ಕನೇ ಸ್ತಂಭವಾಗಿದೆ. ಸಮಾಜದಲ್ಲಿ ನೂರಾರು ಉಳುಕುಗಳು ಇರುತ್ತದೆ. ಆದರೆ ಮಾಧ್ಯಮದವರು ಸಮಾಜಕ್ಕೆ ಒಳ್ಳೆಯದಾಗುವಂತಹ ಸುದ್ದಿಗಳನ್ನು ನೀಡಬೇಕು. ಪತ್ರಿಕೆಗಳು ನಕರಾತ್ಮಕ ವಿಷಯಗಳಿಗೆ ಪ್ರಾಧಾನ್ಯತೆ ಕೊಡಬಾರದು. ಬದಲಿಗೆ ಆಶಾದಾಯಕ, ಅಭಿವೃದ್ಧಿ ಪತ್ರಿಕೋದ್ಯಮಕ್ಕೆ ಹೆಚ್ಚು ಒತ್ತು ನೀಡಬೇಕು ಎಂದು ಸಲಹೆ ನೀಡಿದರು.

ವಾರ್ತಾ ಇಲಾಖೆಯ ಮಾಧ್ಯಮ ಪಟ್ಟಿಗೆ ಪತ್ರಿಕೆಗಳು ಸೇರ್ಪಡೆ ಆಗುತ್ತಿರುವ ಸಂಖ್ಯೆ ದಿನೇ ದಿನೆ ಹೆಚ್ಚುತ್ತಿದೆ. ಪತ್ರಿಕೆಗಳ ಸಂಖ್ಯೆ ಹೆಚ್ಚಳದಿಂದ ಸರಕಾರಕ್ಕೆ ಆರ್ಥಿಕ ಹೊರೆಯಾ ಗುತ್ತಿದೆ. ಈ ಹಿನ್ನೆಲೆಯಲ್ಲಿ ಪತ್ರಿಕೆಗಳ ನೋಂದಣಿ, ಹಾಜರಾತಿ, ಪ್ರಸಾರ ಸಂಖ್ಯೆ ಮೇಲೆ ಇನ್ನಷ್ಟು ನಿಗಾ ವಹಿಸುವ ಅಗತ್ಯವಿರುತ್ತದೆ. ಕೃತಕ ಬುದ್ಧಿಮತ್ತೆ ಎ.ಐ, ಚಾಟ್ ಜಿಪಿಟಿ ಮತ್ತಿತರ ತಂತ್ರಜ್ಞಾನದ ಈ ಯುಗದಲ್ಲಿ ದಿನಪತ್ರಿಕೆಗಳ ಹಾಜರಾತಿಗಾಗಿ 48 ಗಂಟೆಗಳ ಕಾಲಾವಕಾಶ ಅಗತ್ಯವಿಲ್ಲ ಎನಿಸುತ್ತದೆ. ಇದಲ್ಲದೇ ಪ್ರಸಾರ ಸಂಖ್ಯೆಯ ಬಗ್ಗೆಯೂ ನಿಗಾ ವಹಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

ಪತ್ರಕರ್ತರು ಯಾರು ಎಂಬ ಸ್ಪಷ್ಟ ವ್ಯಾಖ್ಯಾನ ಅಗತ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಎಂ. ಎನ್. ಅನುಚೇತ್ ಅವರು ಮಾತನಾಡಿ, ದಿನಪತ್ರಿಕೆಗಳ ಬೆಂಬಲಕ್ಕಾಗಿ ಸರ್ಕಾರವು ಪ್ರೋತ್ಸಾಹ ಜಾಹೀರಾತನ್ನು ನೀಡುತ್ತಿದೆ. ಆದರೆ ಇತ್ತೀಚಿನ ದಿನಗಳಲ್ಲಿ ಪ್ರೋತ್ಸಾಹ ಜಾಹೀರಾತು ಪಡೆಯುವುದಕ್ಕಾಗಿಯೇ ದಿನಪತ್ರಿಕೆಗಳ ಹುಟ್ಟಿಕೊಳ್ಳುತ್ತಿವೆ. ಪ್ರೋತ್ಸಾಹ ಜಾಹೀರಾತಿಗಾಗಿ 2022 ರಲ್ಲಿ 44 ಕೋಟಿ ರೂಪಾಯಿ ವೆಚ್ಚವಾಗಿತ್ತು. ಆದರೆ 2025–2026 ರ ವೇಳೆಗೆ ಅದರ ವೆಚ್ಚ ದ್ವಿಗುಣವಾಗಿ 82 ಕೋಟಿ ರೂಪಾಯಿಗಳಾಗಿರುತ್ತದೆ. ಆದ್ದರಿಂದ ನಿಜವಾಗಿಯೂ ಪತ್ರಿಕೋದ್ಯಮವನ್ನೇ ವೃತ್ತಿಯಾಗಿಸಿಕೊಂಡಿರುವವರಿಗೆ ಪ್ರೋತ್ಸಾಹ ಜಾಹೀರಾತು ತಲುಪಬೇಕಿದೆ. ಹಾಗಾಗಿ ಇದಕ್ಕೆ ಕಡಿವಾಣ ಹಾಕುವ ಅಗತ್ಯವಿರುವುದರಿಂದ ರಾಜ್ಯದ ಎಲ್ಲಾ ಮಾಧ್ಯಮದವರು ಸಹಕರಿಸಬೇಕೆಂದರು.

ಸಾಮಾಜಿಕ ಜಾಲತಾಣ, ಡಿಜಿಟಲ್ ಯುಗದಲ್ಲಿ ನಿಜವಾದ ಪತ್ರಕರ್ತ ಯಾರು ಎಂಬುದು ದೊಡ್ಡ ಪ್ರಶ್ನೆಯಾಗಿದೆ. ಯಾರು ಪತ್ರಕರ್ತ ಎಂಬುದರ ಬಗ್ಗೆ ರಾಷ್ಟ್ರಮಟ್ಟದಲ್ಲಿ ಗಂಭೀರ ಚರ್ಚೆಯಾಗಬೇಕಿದೆ. ಪಿಆರ್ ಜಿಐ ಪತ್ರಿಕೆಗಳ ನೋಂದಣಿ, ನಿರ್ವಹಣೆ ಕುರಿತು ಗಮನಹರಿಸುತ್ತಿದೆ. ಆದರೆ ಇಂದಿನ ಡಿಜಿಟಲ್ ಯುಗದಲ್ಲಿ ಪತ್ರಕರ್ತ ಯಾರು ಎಂಬುದು ಸ್ಪಷ್ಟವಾಗಿ ವ್ಯಾಖ್ಯಾನಿಸುವ ಅಗತ್ಯವಿದೆ ಎಂದು ಆಯುಕ್ತ ಅನುಚೇತ್ ಅವರು ಪ್ರತಿಪಾದಿಸಿದರು.

ಕಾರ್ಯಕ್ರಮದ ಆರಂಭದಲ್ಲಿ ಕಾರ್ಯಾಗಾರದ ಉದ್ದೇಶ ಕುರಿತು ಪ್ರಾಸ್ತಾವಿಕವಾಗಿ ಬೆಂಗಳೂರಿನ ದೂರದರ್ಶನ ಕೇಂದ್ರದ ಮುಖ್ಯಸ್ಥರಾದ ಬಿ.ಕೆ. ಕೇಶವಮೂರ್ತಿ ಮಾತನಾಡಿದರು.

ಎನ್.ಐ.ಸಿ ಉಪನಿರ್ದೇಶಕ ಗೌರವ್ ಶರ್ಮ್, ಅಧಿಕಾರಿಗಳು ಪತ್ರಿಕೆಗಳ ಮಾಲೀಕರು, ಸಂಪಾದಕರು ಉಪಸ್ಥಿತರಿದ್ದರು.

Printed by PRABHAKR G., Printed at M/s. SAI PRINTS, # 8, Subramanya Lane, Cottonpet, Bengaluru, Karnataka - 560053
Published by Smt. LAKSHMINARASAMMA, Owned by Smt. LAKSHMINARASAMMA,
Published at : Varalakonda Village, Somenahalli Hobli, Gudibande Taluk, Chikkaballapur Dist-562104, Karnataka. Editor SHIVAKUMAR K. Mobile: 8147582389 / 9743641515